₹ 6 @vishwavaninews epaper.vishwavani.news vishwavani.news ಬೆಂಗಳೂರು | ಹುಬ್ಬಳ್ಳಿ | ಮಂಗಳೂರು | ದಾವಣಗೆರೆ | ಕಲಬುರಗಿ | ಬೆಳಗಾವಿ ಬುಧವಾರ 05.02.2025 ಸಂಪುಟ: 10 ಸಂಚಿಕೆ: 22 ಪುಟಗಳು: 16 ಪ್ರಧಾನ ಸಂಪಾದಕ: ವಿಶ್ವೇಶ್ವರ ಭಟ್

ವಿಶ್ವವಾಣಿ
ವಿಶ್ವಾಸವೇ ವಿಶ್ವ

ಟೀಂ ಇಂಡಿಯಾ ಬಳಗದಲ್ಲಿ ವರುಣ್

ಇಂಗ್ಲೆಂಡ್ ವಿರುದ್ಧದ ಏಕದಿನ ಸರಣಿಗೆ ಟೀಂ ಇಂಡಿಯಾಕ್ಕೆ ಸ್ಪಿನ್ನರ್ ವರುಣ್ ಚಕ್ರವರ್ತಿ ಆಯ್ಕೆ

ರಾಷ್ಟ್ರಪತಿಗಳ ವಂದನಾ ನಿರ್ಣಯದ ಮೇಲಿನ ಚರ್ಚೆ ವೇಳೆ ಮಾತನಾಡಿದ ಪಿಎಂ ಸುದೀರ್ಘ ಭಾಷಣದುದ್ದಕ್ಕೂ ಪ್ರತಿಪಕ್ಷಗಳನ್ನು ತರಾಟೆಗೆ ತೆಗೆದುಕೊಂಡ ಪ್ರಧಾನಿ

ವಿಕಸಿತ ಭಾರತದ ಪರಿಕಲ್ಪನೆಗೆ ವಿಪಕ್ಷ ಅಡ್ಡಿ: ಮೋದಿ ವಾಗ್ದಾಳಿ

ದೆಹಲಿ: ಭಾರತದ ಅಭಿವೃದ್ಧಿಯ ನಾಗಾಲೋಟವನ್ನು ತಡೆಯುವ ಕೀಳು ರಾಜಕಾರಣ, ವಿಕಸಿತ ಭಾರತದ ಪರಿಕಲ್ಪನೆಗೆ ವಿರುದ್ಧವಾದುದು ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಹೇಳಿದ್ದಾರೆ.

ಲೋಕಸಭೆಯಲ್ಲಿ ರಾಷ್ಟ್ರಪತಿಗಳ ಭಾಷಣಕ್ಕೆ ವಂದನಾ ನಿರ್ಣಯದ ಮೇಲಿನ ಚರ್ಚೆಯನ್ನು ಉದ್ದೇಶಿಸಿ ಮಾತನಾಡಿದ ಪ್ರಧಾನಿ ಮೋದಿ, ಪ್ರತಿಪಕ್ಷಗಳು ತಮ್ಮ ರಾಜಕೀಯ ಲಾಭಕ್ಕಾಗಿ ರಾಷ್ಟ್ರೀಯ ಹಿತಾಸಕ್ತಿಯನ್ನೂ ಬಲಿಕೊಡಲು ಸಿದ್ಧವಿರುವುದು ವಿಷಾದನೀಯ ಎಂದು ಗುಡುಗಿದರು. ಈ ಮೂಲಕ ಭಾರತದ ಭೂಪ್ರದೇಶದ ಮೇಲೆ ಚೀನಾ ಅತಿಕ್ರಮಣದ ಆರೋಪ ಮಾಡಿದ್ದ ರಾಹುಲ್ ಗಾಂಧಿ ಅವರನ್ನು ಪ್ರಧಾನಿ ಮೋದಿ ಪರೋಕ್ಷವಾಗಿ ತರಾಟೆಗೆ ತೆಗೆದುಕೊಂಡರು.

ರಾಷ್ಟ್ರಪತಿ ಭಾಷಣಕ್ಕೆ ವಂದನಾ ನಿರ್ಣಯದ ಮೇಲಿನ ಚರ್ಚೆಯಲ್ಲಿ ಪಾಲ್ಗೊಳ್ಳಲು ದೇಶದ ಜನತೆ ನನಗೆ 14ನೇ ಬಾರಿ ಅವಕಾಶ ಮಾಡಿಕೊಟ್ಟಿದ್ದಾರೆ. ಇದಕ್ಕಾಗಿ ನಾನು ದೇಶದ ಜನತೆಗೆ ಧನ್ಯವಾದ ಅರ್ಪಿಸುತ್ತೇನೆ ಎಂದು ಹೇಳಿದರು.

ರಾಷ್ಟ್ರಪತಿಗಳು ತಮ್ಮ ಭಾಷಣದಲ್ಲಿ ಭಾರತವು ಭವಿಷ್ಯದ 25 ವರ್ಷಗಳಲ್ಲಿ ಸಾಗಬೇಕಾದ ದಾರಿಯನ್ನು ತೋರಿಸಿಕೊಟ್ಟಿದ್ದಾರೆ. ವಿಕಸಿತ ಭಾರತದ ಉದ್ದೇಶದೊಂದಿಗೆ ನಾವು ಹೆಜ್ಜೆ ಹಾಕಬೇಕು ಎಂದು ರಾಷ್ಟ್ರಪತಿಗಳು ತಮ್ಮ ಭಾಷಣದಲ್ಲಿ ನಮಗೆ ಮಾರ್ಗದರ್ಶನ ಮಾಡಿದ್ದಾರೆ. ದೇಶದ ಬಡ ಜನರಿಗೆ ಮನೆ ಕಟ್ಟಿಕೊಡುವ ನಮ್ಮ ಉದ್ದೇಶವನ್ನು ಹಲವರು ಅಣಕಿಸುತ್ತಿದ್ದಾರೆ. ಆದರೆ ಪಕ್ಕಾ ಮನೆ, ಶೌಚಾಲಯ, ವಿದ್ಯುತ್ ಹೊಂದುವ ಬಡಜನರ ಕನಸಿನ ಮಹತ್ವ ಅರಮನೆಯಂತಹ ಮನೆಗಳಲ್ಲಿ ವಾಸಿಸುವ ಜನರಿಗೆ ತಿಳಿಯುವುದಿಲ್ಲ ಎಂದು ಹೇಳಿದರು.

ಇಂದು ಕೆಲವರು ನಗರ ನಕ್ಸಲರ ಭಾಷೆಯನ್ನು ಬಹಿರಂಗವಾಗಿ ಮಾತನಾಡುತ್ತಿರುವುದು ದುರದೃಷ್ಟಕರ, ಭಾರತದ ರಾಜ್ಯ ವ್ಯವಸ್ಥೆಗೆ ಸವಾಲು ಹಾಕುವುದು ಮತ್ತು ಅದರ ವಿರುದ್ಧ ಹೋರಾಟವನ್ನು ಘೋಷಿಸುವುದು ದುರದೃಷ್ಟಕರವಾಗಿದೆ. ಈ ಭಾಷೆಯನ್ನು ಮಾತನಾಡುವವರಿಗೆ ಸಂವಿಧಾನ ಅಥವಾ ರಾಷ್ಟ್ರದ ಏಕತೆ ಅರ್ಥವಾಗುವುದಿಲ್ಲ ಎಂದು ಪ್ರಧಾನಿ ಮೋದಿ ಅವರು ಪರೋಕ್ಷವಾಗಿ ರಾಹುಲ್ ಗಾಂಧಿ ಅವರ ಹೇಳಿಕೆಯನ್ನು ಉಲ್ಲೇಖಿಸಿ ತರಾಟೆಗೆ ತೆಗೆದುಕೊಂಡರು.

ಒಟ್ಟಿನಲ್ಲಿ ಪ್ರಧಾನಿ ಮೋದಿ ಅವರು ಲೋಕಸಭೆಯಲ್ಲಿ ಮಾಡಿದ ತಮ್ಮ ಸುದೀರ್ಘ ಭಾಷಣದಲ್ಲಿ, ಹಲವು ಮಹತ್ವದ ಅಂಶಗಳನ್ನು ಪ್ರಸ್ತಾಪಿಸಿದ್ದು, ತಮ್ಮ ಸರಕಾರದ ಅಭಿವೃದ್ಧಿ ಯೋಜನೆಗಳ ಬಗ್ಗೆ ಸವಿಸ್ತಾರವಾಗಿ ಮಾತನಾಡಿದರು.

ಪ್ರಧಾನಿ ಭಾಷಣದ ಮುಖ್ಯಾಂಶಗಳು

- ನೇರ ಹಣ ವರ್ಗಾವಣೆ ಮೂಲಕ ನಾವು ರೈತರ ಬ್ಯಾಂಕ್ ಅಕೌಂಟ್‌ಗೆ 40 ಸಾವಿರ ಕೋಟಿ ರುಪಾಯಿ ವರ್ಗಾಯಿಸಿದ್ದೇವೆ. ದೇಶದ ರೈತರ ಹಿತಾಸಕ್ತಿಯನ್ನು ಕಾಪಾಡುವ ವಾಗ್ದಾನ ಮಾಡುತ್ತಿದ್ದ ಹಿಂದಿನ ಸರಕಾರಗಳಿಗೂ, ರೈತರ ಹಿತಾಸಕ್ತಿ ಕಾಪಾಡಲು ನಿರ್ಣಯ ಕೈಗೊಳ್ಳುವ ನಮ್ಮ ಸರಕಾರಕ್ಕೂ ಇರುವ ಮುಖ್ಯ ವ್ಯತ್ಯಾಸ ಎಲ್ಲರ ಕಣ್ಣ ಮುಂದಿದೆ.
- ದೇಶದ ಮಧ್ಯಮ ವರ್ಗ ಹೆಚ್ಚಿನ ಆದಾಯ ತೆರಿಗೆ ದರದಿಂದ ಹೈರಾಣಾಗಿತ್ತು. ಆದರೆ ನಮ್ಮ ಸರಕಾರವು ಕಳೆದ 10 ವರ್ಷಗಳಲ್ಲಿ ಮಂಡಿಸಲಾದ ಎಲ್ಲ ಬಜೆಟ್‌ಗಳಲ್ಲಿ ಆದಾಯ ತೆರಿಗೆ ವಿನಾಯಿತಿ ಮಿತಿಯನ್ನು ಏರಿಕೆ ಮಾಡಿ, ಮಧ್ಯಮ ವರ್ಗದ ಹೊರೆಯನ್ನು ಕಡಿಮೆ ಮಾಡಿದೆ. ಈ ಬಾರಿಯ ಕೇಂದ್ರ ಬಜೆಟ್ 2025ರಲ್ಲಿ ನಮ್ಮ ಸರಕಾರವು 12.75 ಲಕ್ಷ ರು.ವರೆಗೆ ಶೂನ್ಯ ಆದಾಯ ತೆರಿಗೆ ಘೋಷಣೆ ಮಾಡಿದೆ.
- ಇಂಡಿಯಾ ಎಐ ಮಿಷನ್ ಬಗ್ಗೆ ಇಡೀ ಜಗತ್ತು ಆಶಾವಾದಿಯಾಗಿದೆ. ಜಾಗತಿಕ ಎಐ ಕ್ಷೇತ್ರದಲ್ಲಿ ಭಾರತ ತನ್ನ ಅಸ್ತಿತ್ವವನ್ನು ದೃಢವಾಗಿ ದಾಖಲಿಸಿದೆ. ನಾವು ಭಾರತದ ಯುವ ಸಮುದಾಯದ ಉತ್ತಮ ಭವಿಷ್ಯಕ್ಕಾಗಿ ಕೆಲಸ ಮಾಡುತ್ತಿದ್ದು, ವಿಕಸಿತ ಭಾರತದ ನಮ್ಮ ಕನಸನ್ನು ಖಂಡಿತವಾಗಿಯೂ ನನಸು ಮಾಡುತ್ತೇವೆ.
- ಪ್ರತಿಪಕ್ಷ ನಾಯಕರು ಮಾತೆತ್ತಿದ್ದರೆ ಸಂವಿಧಾನದ ಬಗ್ಗೆ ಮಾತನಾಡುತ್ತಾರೆ. ಸಂವಿಧಾನ ಅಪಾಯದಲ್ಲಿದೆ ಎಂದು ಸುಳ್ಳು ನಿರೂಪಣೆ ನೀಡುತ್ತಾರೆ. ಆದರೆ ನಮ್ಮ ಕೇಂದ್ರ ಸರಕಾರ ಸಂವಿಧಾನವನ್ನು ಜೀವಿಸುತ್ತದೆ. ಸಂವಿಧಾನದ ಆಶಯಗಳಿಗೆ ತಕ್ಕಂತೆ ನಾವು ಕೆಲಸ ಮಾಡುತ್ತೇವೆ. ಇದಕ್ಕೆ ನಾನು ಹಲವಾರು ಉದಾಹರಣೆ ಕೊಡಬಲ್ಲೆ.

ಬಡವರ ಮನೆ ಮುಂದೆ ಫೋಟೋ ಸೆಷನ್ ಮಾಡುವ ನಾಯಕರಿಗೆ, ಸದನದಲ್ಲಿ ನಡೆಯುವ ಬಡವರ ಬಗೆಗಿನ ಚರ್ಚೆ ಬೇಸರ ತರಿಸುತ್ತದೆ. ನಾವು ಸಮಸ್ಯೆಯ ಸಮಾಧಾನಕ್ಕಾಗಿ ನಿರಂತರವಾಗಿ ಪ್ರಯತ್ನ ಮಾಡುತ್ತೇವೆ. ಆದರೆ ಕೆಲವರು ಇದನ್ನು ಅಪಹಾಸ್ಯ ಮಾಡುತ್ತಾ ದೇಶದ ಜನರ ಭಾವನೆಗೆ ಧಕ್ಕೆ ತರುತ್ತಾರೆ.

- ನರೇಂದ್ರ ಮೋದಿ ಪ್ರಧಾನಿ

ದೆಹಲಿಯಲ್ಲೇ ಠಿಕಾಣಿ ಹೂಡಿದರೂ ಸಿಗದ ವರಿಷ್ಠರು ಇಂದು ಭೇಟಿ ಸಾಧ್ಯತೆ, ಹಲವು ಬೇಡಿಕೆಗಳ ಮಂಡನೆ

ಭಿನ್ನರ ಬಣದಿಂದ ದೆಹಲಿ ದಂಡಯಾತ್ರೆ

ಬೆಂಗಳೂರು: ಬಿಜೆಪಿ ಹಾಲಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಬದಲಾವಣೆಗೆ ಪಟ್ಟು ಹಿಡಿದಿರುವ ಭಿನ್ನ ಬಣದ ನಾಯಕರು ದೆಹಲಿ ದಂಡಯಾತ್ರೆ ಕೈಗೊಂಡಿದ್ದು, ವರಿಷ್ಠರ ಭೇಟಿಗಾಗಿ ಕಾದು ಕುಳಿತಿದ್ದಾರೆ. ಆದರೆ ಈವರೆಗೂ ಯಾವುದೇ ವರಿಷ್ಠರ ಭೇಟಿ ನಡೆದಿಲ್ಲ ಎನ್ನಲಾಗಿದೆ.

ಪ್ರಧಾನಿ ನರೇಂದ್ರ ಮೋದಿ, ಅಮಿತ್ ಶಾ, ಜೆ.ಪಿ.ನಡ್ಡಾ ಸೇರಿದಂತೆ ಪ್ರಮುಖರು ಸಂಸತ್ ಅಧಿವೇಶದಲ್ಲಿ ಭಾಗಿಯಾಗಿದ್ದು, ಬಿಡುವಿಲ್ಲದ ಕಾರ್ಯಕ್ರಮದಲ್ಲಿ ತೊಡಗಿದ್ದಾರೆ. ಅಲ್ಲದೆ ಇಂದು ನಡೆಯಲಿರುವ ದೆಹಲಿ ಚುನಾವಣೆಯತ್ತ ಗಮನ ಹರಿಸಿದ್ದಾರೆ. ವರಿಷ್ಠರ ಭೇಟಿಗೆ ಭಿನ್ನರು ಸಮಯ ಕೋರಿದ್ದರೂ ಪ್ರಮುಖರು ಸಿಗುವುದು ಅನುಮಾನ ಎನ್ನಲಾಗಿದೆ.

ಈ ಮಧ್ಯೆ ಸೋಮವಾರ ರಾತ್ರಿ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ ಅವರನ್ನು ಭೇಟಿಯಾಗಿ ರಾಜ್ಯದ ವಸ್ತು ಸ್ಥಿತಿ ವಿವರಿಸಿದ್ದೇನೆ ಎಂದು ಮಾಜಿ ಸಚಿವ ರಮೇಶ್ ಜಾರಕಿಹೊಳಿ ಹೇಳಿದ್ದಾರೆ. ಮಂಗಳವಾರ ಬೆಳಗ್ಗೆ ಸಂಸತ್ತಿನಲ್ಲಿ ನಾಗರಿಕ ವಿಮಾನಯಾನ ಸಚಿವ ಜ್ಯೋತಿರಾದಿತ್ಯ ಸಿಂಧ್ಯ ಅವರನ್ನು ಮಾಜಿ ಸಚಿವರಾದ ರಮೇಶ್ ಜಾರಕಿಹೊಳಿ, ಕುಮಾರ್ ಬಂಗಾರಪ್ಪ, ಶ್ರೀಮಂತ ಪಾಟೀಲ್ ಸೇರಿದಂತೆ ಕೆಲವರು ಭೇಟಿಯಾಗಿದ್ದರು. ರಾಜ್ಯ ಚುನಾವಣಾ ಉಸ್ತುವಾರಿ ಶಿವರಾಜ್ ಸಿಂಗ್ ಚೌವ್ಹಾಣ್ ಅವರನ್ನು ಭೇಟಿ ಮಾಡಲು ಸಮಯಾವಕಾಶ ಕೇಳಿದ್ದರೂ ಇನ್ನೂ ಭೇಟಿ ನಡೆದಿಲ್ಲ. ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಮತ್ತಿತರರು ತಡರಾತ್ರಿ ವೇಳೆಗೆ ದೆಹಲಿ ತಲುಪಿದ್ದು, ಇಂದು ವರಿಷ್ಠರನ್ನು ಭೇಟಿ ಮಾಡಲಿದ್ದು, 23 ಜಿಲ್ಲಾಧ್ಯಕ್ಷರ ಆಯ್ಕೆ ಘೋಷಣೆ ರದ್ದು ಮಾಡಬೇಕು, ರಾಜ್ಯಾಧ್ಯಕ್ಷ ಸ್ಥಾನಕ್ಕೆ ಚುನಾವಣೆ ನಡೆಸಬೇಕು, ವಿಜಯೇಂದ್ರ ಅವರನ್ನು ಕೆಳಗಿಳಿಸಬೇಕು ಎಂಬುದು ಸೇರಿದಂತೆ ಹಲವು ಬೇಡಿಕೆಗಳನ್ನು ವರಿಷ್ಠರ ಮುಂದೆ ಇಡಲಿದ್ದಾರೆ.

ಭ್ರಷ್ಟ ಕಾಂಗ್ರೆಸ್ ಸರಕಾರ ಮತ್ತು ಸಿಎಂ ಸಿದ್ದರಾಮಯ್ಯ ವಿರುದ್ಧ ನಡೆದ ಹೋರಾಟದಲ್ಲಿ ನೇತೃತ್ವ ವಹಿಸಲಾಗಿದೆ. ಭಿನ್ನರ ಹೇಳಿಕೆಗಳಿಂದ ಕಾರ್ಯಕರ್ತರೆಲ್ಲ ನೊಂದಿದ್ದಾರೆ. ದೆಹಲಿ ವರಿಷ್ಠರ ಮುಂದೆ ಏನು ಹೇಳಬೇಕಾಗಿದೆಯೋ ಹೇಳಿಕೊಳ್ಳಲಿ. ವರಿಷ್ಠರೊಂದಿಗೆ ಸಂಪರ್ಕದಲ್ಲಿದ್ದೇನೆ.

- ಬಿ.ವೈ.ವಿಜಯೇಂದ್ರ ಬಿಜೆಪಿ ರಾಜ್ಯಾಧ್ಯಕ್ಷ

ರಾಮುಲುಗೆ ನಮ್ಮ ಬೆಂಬಲ

ಶ್ರೀರಾಮುಲು ರಾಜ್ಯಾಧ್ಯಕ್ಷರಾದರೆ ನಮ್ಮದೇನೂ ತಕರಾರಿಲ್ಲ, ಅವರೂ ನಮ್ಮವರೇ. ರಾಜ್ಯದ ಎಲ್ಲ ಸಂಸದರು ನಮ್ಮ ಜತೆಗಿದ್ದಾರೆ, ವಿಜಯೇಂದ್ರ ಸಹೋದರ ಒಬ್ಬರನ್ನು ಬಿಟ್ಟು. ಯತ್ನಾಳ್ ರಾಜ್ಯಾಧ್ಯಕ್ಷ ಆಗಬೇಕು ಅನ್ನುವವರೂ ಇದ್ದಾರೆ. ಏನಾಗುತ್ತದೋ ನೋಡೋಣ. ನಾನು ಯಡಿಯೂರಪ್ಪ ಸಮಕಾಲಿನವನು. ಒಂದು ವೇಳೆ ವಿಜಯೇಂದ್ರರನ್ನು ಮತ್ತೆ ರಾಜ್ಯಾಧ್ಯಕ್ಷ ಮಾಡಿದರೆ ನಮ್ಮ ನಿರ್ಣಯ ತಿಳಿಸುತ್ತೇವೆ. ನಮ್ಮ ಹೋರಾಟವಂತೂ ಮುಂದುವರಿಯುತ್ತದೆ ಎಂದು ಯತ್ನಾಳ್ ಹೇಳಿದ್ದಾರೆ ಎಂದರು.

ವಿಜಯೇಂದ್ರ ಬೇಡವೇ ಬೇಡ

ವಿಜಯೇಂದ್ರ ರಾಜ್ಯಾಧ್ಯಕ್ಷ ಸ್ಥಾನದಿಂದ ಇಳಿಯಬೇಕು. ಯಾರಾದರೂ ಮುಂದಿನ ರಾಜ್ಯಾಧ್ಯಕ್ಷರಾಗಲಿ, ನಮ್ಮ ಬೆಂಬಲ ಇದೆ ಎಂದು ಶಾಸಕ ಬಿ.ಪಿ.ಹರೀಶ್ ಹೇಳಿದ್ದಾರೆ. ಯಡಿಯೂರಪ್ಪ ಸಿಎಂ ಆಗಿದ್ದಾಗ ಅತಿ ಹೆಚ್ಚು ಭ್ರಷ್ಟಾಚಾರ ಆಗಿದ್ದು ವಿಜಯೇಂದ್ರನ ಮೂಲಕ. ಅಶೋಕ, ಬೊಮ್ಮಾಯಿ, ಸುನೀಲ್ ಕುಮಾರ್, ಯತ್ನಾಳ್, ಅರವಿಂದ ಲಿಂಬಾವಳಿ, ಕುಮಾರ್ ಬಂಗಾರಪ್ಪ, ನಿರಾಣಿ ಇವರಲ್ಲಿ ಯಾರು ಬೇಕಾದರೂ ರಾಜ್ಯಾಧ್ಯಕ್ಷರಾಗಲಿ. ಹೈಕಮಾಂಡ್ ನವರು ಸಮಯಕ್ಕೆ ಸರಿಯಾದ ಕ್ರಮ ತೆಗೆದುಕೊಳ್ಳುತ್ತಾರೆ ಎಂದರು.

ಸೊಂಪಾದ ಪುಟಗಳು

ನರವಿಜ್ಞಾನದ ಹೆಬ್ಬಾಗಿಲನ್ನು ತೆರೆದ ಹುತಾತ್ಮ ಲೆಬೋರ್ನ್ಯ — ಹಿಂದಿರುಗಿ ನೋಡಿದಾಗ, ಡಾ. ನಾ.ಸೋಮೇಶ್ವರ 6

ನಮ್ಮ ನದಿಗಳ ಪಾವಿತ್ರ್ಯವನ್ನು ಉಳಿಸುವವರಾರು? — ಲೋಕಮತ, ಲೋಕೇಶ್ ಕಾಯರ್ಗ 7

ದಾರಿದೀಪೋಕ್ತಿ

ಅದ್ಭುತ ಅಥವಾ ಉತ್ತಮ ಕೆಲಸ ಮಾಡುವ ಏಕೈಕ ಮಾರ್ಗವೆಂದರೆ, ನೀವು ಮಾಡುವ ಕೆಲಸವನ್ನು ಅತ್ಯಂತ ಗಾಢವಾಗಿ ಪ್ರೀತಿಸುವುದು ಮತ್ತು ಅದರಲ್ಲಿ ನೂರಕ್ಕೆ ನೂರು ತಲ್ಲೀನವಾಗುವುದು. ನಿಮ್ಮ ಕೆಲಸವನ್ನು ನೀವು ಪ್ರೀತಿಸದೇ, ಬೇರೆಯವರು ಪ್ರೀತಿಸುವುದಿಲ್ಲ. ನಿಮ್ಮ ಮೇಲೆ ನಿಮಗೆ ನಂಬಿಕೆ ಇರಲಿ.

ವಕ್ರತುಂಡೋಕ್ತಿ



'ಸಮಯ ಬಂದಾಗ ಎಲ್ಲವನ್ನೂ ಬಿಚ್ಚಿಡುತ್ತೇನೆ' ಅಂತ ಯಾರಾದರೂ ಹೇಳಿದರೆ ಅದು ಗಂಡಸು ರಾಜಕಾರಣಿ ಎಂದು ತಿಳಿಯಬಹುದು.

205 ಭಾರತೀಯರು ಅಮೆರಿಕದಿಂದ ವಾಪಸ್

ವಾಷಿಂಗ್ಟನ್: ಅಕ್ರಮವಾಗಿ ಅಮೆರಿಕ ಪ್ರವೇಶಿಸಿದ್ದ 205 ಭಾರತೀಯರನ್ನು ಗಡಿಪಾರು ಪ್ರಕ್ರಿಯೆ ಮೊದಲ ಹಂತದಲ್ಲಿ ಆರಂಭವಾಗಿದೆ. ಎಲ್ಲರನ್ನೂ ಅಮೆರಿಕ ಮಿಲಿಟರಿ ವಿಮಾನದಲ್ಲಿ ಭಾರತಕ್ಕೆ ವಾಪಸ್ ಕರೆತರಲಾಗುತ್ತಿದ್ದು, ಅಮೆರಿಕದ ಟೆಕ್ಸಾಸ್‌ನಿಂದ ವಿಮಾನ ಹೊರಟಿದೆ. ಅಮೆರಿಕದಲ್ಲಿರುವ ಅಕ್ರಮ ಭಾರತೀಯ ವಲಸಿಗರನ್ನು ಮರಳಿ ಕರೆತರುವ ಇಂತಹ ಅನೇಕ ವಿಮಾನಗಳಿದ್ದು, ಇದು ಮೊದಲನೆಯದಾಗಿದೆ. ಅಮೆರಿಕದ ಸಿ-17 ಮಿಲಿಟರಿ ವಿಮಾನವು ಭಾರತೀಯ ಪ್ರಜೆಗಳನ್ನು ಮನೆಗೆ ಮರಳಿ ಕರೆತರುತ್ತಿದೆ. ಯುಎಸ್ ವಾಯುಪಡೆಯ ಸಿ-17 ವಿಮಾನವು 205 ಪ್ರಯಾಣಿಕರಿಗೆ ಒಂದೇ ಒಂದು ಶೌಚಾಲಯವನ್ನು ಹೊಂದಿದೆ. ಅಕ್ರಮ ವಲಸಿಗರ ವಿಚಾರದಲ್ಲಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಕಠಿಣ ನಿಲುವು ಕೈಗೊಂಡಿದ್ದಾರೆ. ಅದಕ್ಕೆ ಅನುಗುಣವಾಗಿ ವಲಸಿಗರನ್ನು ಗಡಿಪಾರು ಮಾಡಲಾಗುತ್ತಿದೆ.

ಮಾತಂದ್ರೆ ಮಾತು

ಕುಮಾರಸ್ವಾಮಿ ಅವರು ಮೊದಲು ತಮ್ಮ ಕರ್ತವ್ಯ ಮಾಡಲಿ. ಅದು ಬಿಟ್ಟು, ಅವರು ಕೇಳಲಿಲ್ಲ, ಇವರು ಕೇಳಲಿಲ್ಲ ಅಂತ ಕಥೆ ಹೇಳಬಾರದು. ಹಾಗಿದ್ದರೆ, ಕೇಂದ್ರ ಸರಕಾರದಲ್ಲಿ ಇವರದ್ದು ಏನೂ ನಡೆಯುವುದಿಲ್ಲವೇ? ಪ್ರಧಾನಿ ಮೋದಿ ಮುಂದೆ ಇವರ ಬೇಳೆಕಾಳು ಬೇಯುವುದಿಲ್ಲವೇ?

- ಎಚ್.ಸಿ.ಬಾಲಕೃಷ್ಣ ಶಾಸಕ

ಫನ್‌ತರಂಗ

- ರಘುಪತಿ ಶೃಂಗೇರಿ -



ನಾಳೆಯಿಂದ ಮುಖ್ಯಮಂತ್ರಿ ಸಿದ್ದು ಮ್ಯಾರಥಾನ್ ಸಭೆ

ಬೆಂಗಳೂರು: ಮಾರ್ಚ್ 2ನೇ ವಾರದಲ್ಲಿ ಮಂಡನೆಯಾಗಲಿರುವ ರಾಜ್ಯ ಬಜೆಟ್‌ಗೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಗುರುವಾರದಿಂದ ಮ್ಯಾರಥಾನ್ ಸಭೆಗಳನ್ನು ನಡೆಸಲು ಸಂಕಲ್ಪ ಮಾಡಿದ್ದಾರೆ.

ಫೆ.3ರಿಂದಲೇ ಬಜೆಟ್ ಪೂರ್ವಭಾವಿ ಇಲಾಖಾವಾರು ಸಭೆ ನಡೆಯಬೇಕಿತ್ತು. ಆದರೆ ಮೊಣಕಾಲು ನೋವಿನ ಸಮಸ್ಯೆಯಿಂದ ಆಸ್ಪತ್ರೆಗೆ ದಾಖಲಾಗಿದ್ದರಿಂದ ಇಲಾಖಾವಾರು ಸಭೆಗಳನ್ನು ಮುಂದೂಡಲಾಗಿತ್ತು. ಆದರೀಗ ಗುರುವಾರದಿಂದ ವಿವಿಧ ಇಲಾಖೆಗಳ ಪೂರ್ವಭಾವಿ ಸಭೆ ನಡೆಸಲು ತೀರ್ಮಾನಿಸಿದ್ದು, ನಿತ್ಯ ಆರರಿಂದ ಎಂಟು ಇಲಾಖೆಗಳ ಸಭೆ ನಡೆಸಲಿದ್ದಾರೆ ಎಂದು ತಿಳಿದುಬಂದಿದೆ.

ಪೂರ್ವಭಾವಿ ಸಭೆಗಳು ಕರ್ನಾಟಕ ವಿದ್ಯುತ್ ನಿಗಮದ ಸಭಾಂಗಣದಲ್ಲಿ ನಡೆಯಲಿದ್ದು, ಇಲಾಖಾವಾರು ಸಚಿವರು, ಅಪರ ಮುಖ್ಯ ಕಾರ್ಯದರ್ಶಿ, ಪ್ರಧಾನ ಕಾರ್ಯದರ್ಶಿ ಕಾರ್ಯದರ್ಶಿಗಳೊಂದಿಗಿನ ಸಭೆಗೆ ಐವರು ಅಧಿಕಾರಿಗಳು ಮಾತ್ರ ಉಪಸ್ಥಿತರಿರಬೇಕು ಎಂದು ಸೂಚನೆ ನೀಡಲಾಗಿದೆ.

- ನಿತ್ಯ ಆರರಿಂದ ಎಂಟು ಇಲಾಖೆಗಳ ಸಭೆ ನಡೆಸಲಿರುವ ಮುಖ್ಯಮಂತ್ರಿ
- ಇಲಾಖಾವಾರು ಬೇಡಿಕೆ, ಅನುದಾನ ಹಂಚಿಕೆಗೆ ಸಂಬಂಧ ಚರ್ಚೆ

ಗುರುವಾರ, ಶುಕ್ರವಾರ, ಶನಿವಾರ ನಿರಂತರ ಸಭೆಗಳು ನಡೆಯಲಿದ್ದು, ಬಳಿಕ ಫೆ.10 ಹಾಗೂ ಫೆ.14ರಂದು ಇನ್ನುಳಿದ ಇಲಾಖೆಗಳಿಗೆ ಸಂಬಂಧಿಸಿದಂತೆ ಸಭೆ ನಡೆಸಲು ತೀರ್ಮಾನಿಸಲಾಗಿದೆ. ಈಗಾಗಲೇ ಎಲ್ಲ ಇಲಾಖೆಗಳ ಪ್ರಗತಿ ಪರಿಶೀಲನಾ ಸಭೆ ನಡೆಸಿದ ಸಿದ್ದರಾಮಯ್ಯ ಅವರು, 2025-26ನೇ ಸಾಲಿನಲ್ಲಿ ಇಲಾಖಾವಾರು ಬೇಡಿಕೆ ಹಾಗೂ ಅನುದಾನ ಹಂಚಿಕೆಗೆ ಸಂಬಂಧಿಸಿದಂತೆ ಸಭೆ ನಡೆಸಲಿದ್ದಾರೆ. ಇದಾದ ಬಳಿಕ ಫೆಬ್ರವರಿ ಕೊನೇ ವಾರ, ಮಾರ್ಚ್ ಮೊದಲ ವಾರದಲ್ಲಿ ಅಂತಿಮ ಸುತ್ತಿನ ಸಭೆ ನಡೆಯಲಿದೆ ಎಂದು ಮೂಲಗಳು ತಿಳಿಸಿವೆ.

ಪ್ರೇಯಸಿಗೆ 3 ಕೋಟಿ ರು. ಮೌಲ್ಯದ ಮನೆ ಉಡುಗೊರೆ ಕೊಟ್ಟ ಹೈಟೆಕ್ ಕಳ್ಳ

ಚಿನ್ನಗಳ್ಳನ ಪ್ರೇಮಕಥೆ

ಬೆಂಗಳೂರು: ಕಳವು ಮಾಡಿದ ಚಿನ್ನಾಭರಣಗಳನ್ನು ಕರಗಿಸಿ ಗಟ್ಟಿ ಮಾಡಿ ಮಾರಾಟ ಮಾಡಿದ ಹಣದಿಂದ ಪ್ರೇಯಸಿಗೆ ಬರೋಬ್ಬರಿ 3 ಕೋಟಿ ರು. ಮೌಲ್ಯದ ಮನೆ ಕಟ್ಟಿಸಿಕೊಟ್ಟಿದ್ದ ಖತರ್ನಾಕ್ ಖದೀಮನೊಬ್ಬ ಮಡಿವಾಳ ಠಾಣೆಯ ಪೊಲೀಸರ ಬಲೆಗೆ ಬಿದ್ದಿದ್ದಾನೆ.

ಸೊಲ್ಲಾಪುರ ಮೂಲದ ಪಂಚಾಕ್ಷರಿ ಸ್ವಾಮಿ (37) ಬಂಧಿತ ಆರೋಪಿ. ಆತನಿಂದ 12.25 ಲಕ್ಷ ಮೌಲ್ಯದ 181 ಗ್ರಾಂ ಚಿನ್ನದ ಗಟ್ಟಿ, 333 ಗ್ರಾಂ ಬೆಳ್ಳಿಯ ವಸ್ತುಗಳು, ಚಿನ್ನದ ಗಟ್ಟಿ ಮಾಡಲು ಉಪಯೋಗಿಸುತ್ತಿದ್ದ ಒಂದು ಫೈರ್ ಗನ್, ಮೂಸ್ ಜಪ್ತಿ ಮಾಡಲಾಗಿದೆ.

ಕಳವು ಪ್ರಕರಣದಲ್ಲಿ ಭಾಗಿಯಾಗಿದ್ದ ಪಂಚಾಕ್ಷರಿ ಸ್ವಾಮಿಯ ಸಹಚರ ತಲೆಮರೆಸಿಕೊಂಡಿದ್ದು, ಪತ್ತೆ ಕಾರ್ಯ ಮುಂದುವರಿದಿದೆ. ಬಂಧಿತ ಆರೋಪಿಯು ಪ್ರಖ್ಯಾತ ನಟಿಯೊಬ್ಬಳ ಜತೆಗೂ ನಂಟು ಹೊಂದಿರುವುದು ತನಿಖೆಯಲ್ಲಿ ಪತ್ತೆಯಾಗಿದೆ.

ತನ್ನ ಮನೆ ಹರಾಜಿಗೆ: ಪಂಚಾಕ್ಷರಿ ಸ್ವಾಮಿ ತಂದೆ ರೈಲ್ವೆ ಇಲಾಖೆಯ ಉದ್ಯೋಗಿಯಾಗಿದ್ದು, ಅವರ ಅಕಾಲಿಕ ಸಾವಿನ ಬಳಿಕ ತಾಯಿಗೆ ನೌಕರಿ ಸಿಕ್ಕಿತ್ತು. ಚಿಕ್ಕದಾಗಿರುವ ಆತನ ಮನೆಯು ತಾಯಿಯ ಹೆಸರಿನಲ್ಲಿದೆ. ಈ ಮನೆ ಮೇಲೆ ಸಾಲ ಇದ್ದು, ಸಾಲ ಕಟ್ಟದ ಹಿನ್ನೆಲೆಯಲ್ಲಿ ಬ್ಯಾಂಕ್‌ನಿಂದ ನೋಟಿಸ್ ಬಂದಿದೆ. ವಾಸದ ಮನೆ ಸದ್ಯ ಹರಾಜಿಗೆ ಬಂದಿದೆ.

ಮಹಾರಾಷ್ಟ್ರದಿಂದ ಬೆಂಗಳೂರಿಗೆ ಶಿಫ್ಟ್!

2024ರಲ್ಲಿ ಜೈಲಿನಿಂದ ಬಿಡುಗಡೆಯಾದ ಪಂಚಾಕ್ಷರಿ ಬೆಂಗಳೂರಿಗೆ ಬಂದು ಕಳ್ಳತನ ಆರಂಭಿಸಿದ್ದ. ಬೀಗ ಹಾಕಿದ ಮನೆಗಳನ್ನೇ ಟಾರ್ಗೆಟ್ ಮಾಡುತ್ತಿದ್ದ ಇವನು ಸದ್ದಿಲ್ಲದೇ ಕೆಲಸ ಮುಗಿಸಿ ಬಿಡುತ್ತಿದ್ದ. ಕಳೆದ ಜನವರಿ 9ರಂದು ಮಡಿವಾಳದಲ್ಲಿ ಮನೆ ಕಳ್ಳತನ ಮಾಡಿದ್ದ ಇವನು ಕಳ್ಳತನ ಮಾಡಿದ ಬಳಿಕ ರಸ್ತೆಯಲ್ಲೇ ಬಟ್ಟೆ ಬದಲಿದ್ದಾನೆ. ಇದೇ ಸುಳಿವಿನ ಮೇಲೆ ಮಡಿವಾಳ ಪೊಲೀಸರು ಆರೋಪಿಯನ್ನು ಬಂಧಿಸಿದ್ದಾರೆ. ಪಂಚಾಕ್ಷರಿ ಮೇಲೆ 180ಕ್ಕೂ ಹೆಚ್ಚು ಪ್ರಕರಣಗಳು ದಾಖಲಾಗಿರುವುದು ಬೆಳಕಿಗೆ ಬಂದಿದೆ.

22 ಲಕ್ಷದ ಅಕ್ವೇರಿಯಂ ಉಡುಗೊರೆ: ಪಂಚಾಕ್ಷರಿಗೆ ಮದುವೆಯಾಗಿದ್ದರೂ ಪ್ರೇಯಸಿಯ ಶೋಕಿ ಹೊಂದಿದ್ದ. ಮದುವೆಯಾಗಿ ಮಗು ಇದ್ದರೂ 2016ರಲ್ಲಿ ಪ್ರಿಯತಮೆಗೆ ಕೊಲ್ಕತ್ತಾದಲ್ಲಿ 3 ಕೋಟಿ ಮೌಲ್ಯದ ಮನೆ ಗಿಫ್ಟ್ ಕೊಟ್ಟಿದ್ದಾನೆ. ಇಷ್ಟೇ ಅಲ್ಲದೇ ಪ್ರಿಯತಮೆ ಹುಟ್ಟುಹಬ್ಬಕ್ಕೆ 22 ಲಕ್ಷದ ಅಕ್ವೇರಿಯಂ ಗಿಫ್ಟ್ ಕೊಟ್ಟಿದ್ದ ಎಂಬುದು ತನಿಖೆಯಲ್ಲಿ ತಿಳಿದುಬಂದಿದೆ.

ಪಿ.ಎನ್.ದೇಸಾಯಿ ಆಯೋಗದ ಅವಧಿ ಮೇ 31 ರವರೆಗೆ ವಿಸ್ತರಣೆ

ಬೆಂಗಳೂರು: ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ (ಮುಡಾ) 2006 ರಿಂದ 2024 ರ ಜುಲೈ 15 ರವರೆಗೂ ನಡೆದಿರುವ ಭೂಸ್ವಾಧೀನ, ಬಡಾವಣೆಗಳ ನಿರ್ಮಾಣ, ನಿವೇಶನ ಹಂಚಿಕೆ, ಪರಿಹಾರ ವಿತರಣೆ ಮತ್ತು ಬದಲಿ ನಿವೇಶನಗಳ ಹಂಚಿಕೆ ಆರೋಪಗಳ ಕುರಿತು ವಿಚಾರಣೆ ನಡೆಸಲು ರಾಜ್ಯ ಸರಕಾರ ನೇಮಿಸಿದ್ದ ಹೈಕೋರ್ಟ್ ನಿವೃತ್ತ ನ್ಯಾಯಮೂರ್ತಿ ಪಿ.ಎನ್.ದೇಸಾಯಿ ನೇತೃತ್ವದ ಏಕ ಸದಸ್ಯ ಆಯೋಗದ ಅವಧಿಯನ್ನು ಮೇ 31 ರವರೆಗೆ ವಿಸ್ತರಿಸಲಾಗಿದೆ.

ವಿಚಾರಣಾ ಆಯೋಗದ ಅವಧಿ ವಿಸ್ತರಿಸುವಂತೆ ಆಯೋಗದ ಕಾರ್ಯದರ್ಶಿ ಜ.6ರಂದು ಸರಕಾರಕ್ಕೆ ಮನವಿ ಸಲ್ಲಿಸಿದ್ದರು. ಎಚ್.ಡಿ.ಕುಮಾರಸ್ವಾಮಿ, ಬಿ.ಎಸ್. ಯಡಿಯೂರಪ್ಪ, ಡಿ.ವಿ.ಸದಾನಂದಗೌಡ, ಜಗದೀಶ್ ಶೆಟ್ಟರ್, ಸಿದ್ದರಾಮಯ್ಯ ಮತ್ತು ಬಸವರಾಜ ಬೊಮ್ಮಾಯಿ ಮುಖ್ಯಮಂತ್ರಿಯಾಗಿದ್ದ ಅವಧಿಯಲ್ಲಿ ಪ್ರಾಧಿಕಾರದಲ್ಲಿ ನಡೆದಿರಬಹುದಾದ ಅವ್ಯವಹಾರಗಳ ಕುರಿತು ವಿಚಾರಣೆ ನಡೆಸಿ, ವರದಿ ಸಲ್ಲಿಸುವ ಜವಾಬ್ದಾರಿಯನ್ನು ಆಯೋಗಕ್ಕೆ ವಹಿಸಲಾಗಿದೆ.

1.55 ಕೋಟಿ ನರೇಗಾ ಸಕ್ರಿಯ ಕಾರ್ಮಿಕರ ಹೆಸರು ಡಿಲೀಟ್

ದೆಹಲಿ: 2022ರಿಂದ 2024ರ ಅವಧಿಯಲ್ಲಿ ಮಹಾತ್ಮ ಗಾಂಧಿ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಿಂದ (ನರೇಗಾ) 1.55 ಕೋಟಿ ಸಕ್ರಿಯ ಕಾರ್ಮಿಕರ ಹೆಸರುಗಳನ್ನು ಅಳಿಸಿ ಹಾಕಲಾಗಿದೆ ಎಂದು ಸರಕಾರ ಸಂಸತ್ತಿನಲ್ಲಿ ಮಂಗಳವಾರ ಮಾಹಿತಿ ನೀಡಿದೆ. ಪ್ರಶ್ನೆಯೊಂದಕ್ಕೆ ಉತ್ತರಿಸಿದ ಗ್ರಾಮೀಣ ಅಭಿವೃದ್ಧಿ ಖಾತೆ ರಾಜ್ಯ ಸಚಿವ ಕಮಲೇಶ್ ಪಾಸ್ವಾನ್ ಅವರು, ಉದ್ಯೋಗ ಕಾರ್ಡ್‌ಗಳ ದುರುಪಯೋಗ ತಡೆಗಾಗಿ ಮತ್ತು ನೈಜ ಫಲಾನುಭವಿಗಳನ್ನು ಯೋಜನೆಯಿಂದ ಹೊರಗಿಡುವುದನ್ನು ತಪ್ಪಿಸುವ ಉದ್ದೇಶದಿಂದ ಈ ಕ್ರಮ ಕೈಗೊಳ್ಳಲಾಗಿದೆ. ಫೆ.1ರವರೆಗೆ 13.41 ಕೋಟಿ ಸಕ್ರಿಯ ಕಾರ್ಮಿಕರ ಪೈಕಿ 13.34 ಕೋಟಿ (99.47%) ಕಾರ್ಮಿಕರ ಹೆಸರಿನ ಜತೆ ಆಧಾರ್ ಸಂಖ್ಯೆಯನ್ನು ಜೋಡಿಸಲಾಗಿದೆ ಎಂದು ತಿಳಿಸಿದರು.

ಕಾರಣಗಳು

- ಸುಳ್ಳು ಅಥವಾ ತಪ್ಪು ಮಾಹಿತಿ ಇರುವ ಉದ್ಯೋಗ ಕಾರ್ಡ್
- ಗ್ರಾಮ ಪಂಚಾಯಿತಿಯಿಂದ ಕುಟುಂಬಗಳ ಶಾಶ್ವತ ಸ್ಥಳಾಂತರ
- ಗ್ರಾಮಗಳನ್ನು 'ನಗರ' ಎಂದು ವರ್ಗೀಕರಿಸಿದ ಕಾರಣ

ಬಸವನಬಾಗೇವಾಡಿಯಲ್ಲಿ ಬೃಹತ್ ಸಭೆ | ಮಾಜಿ ಡಿಸಿಎಂ ಈಶ್ವರಪ್ಪ, 1008 ಸ್ವಾಮೀಜಿಗಳು ಭಾಗಿ

ಕ್ರಾಂತಿವೀರ ಬ್ರಿಗೇಡ್‌ಗೆ ವಿಧ್ಯುಕ್ತ ಚಾಲನೆ

ವಿಜಯಪುರ/ಬಸವನಬಾಗೇವಾಡಿ: ಮಾಜಿ ಡಿಸಿಎಂ ಕೆ.ಎಸ್. ಈಶ್ವರಪ್ಪ ನೇತೃತ್ವದ ಕ್ರಾಂತಿವೀರ ಬ್ರಿಗೇಡ್‌ಗೆ ಬಸವನಬಾಗೇವಾಡಿಯಲ್ಲಿ ಮಂಗಳವಾರ ವಿಧ್ಯುಕ್ತ ಚಾಲನೆ ದೊರೆತಿದೆ. ಈಶ್ವರಪ್ಪ ದಂಪತಿ ಕನ್ನೇರಿಮಠದ ಅದೃಶ್ಯ ಕಾಡಸಿದ್ದೇಶ್ವರ ಸ್ವಾಮೀಜಿಗಳ ಪಾದಪೂಜೆ ಮಾಡುವ ಮೂಲಕ 1008 ಪೂಜ್ಯರ ಪಾದಪೂಜೆಯೊಂದಿಗೆ ಬ್ರಿಗೇಡ್ ಉದ್ಘಾಟನೆ ನೆರವೇರಿದೆ. ಈ ವೇಳೆ ಈಶ್ವರಪ್ಪ ಪುತ್ರ ಕಾಂತೇಶ್ ಮತ್ತು ಕುಟುಂಬದವರು ಭಾಗಿಯಾಗಿದ್ದರು.

ಗೋರಕ್ಷಣೆಗೆ ಬ್ರಿಗೇಡ್ ಪಣ: ಬ್ರಿಗೇಡ್ ಸಂಚಾಲಕ, ಮಾಜಿ ಡಿಸಿಎಂ ಕೆ.ಎಸ್.ಈಶ್ವರಪ್ಪ ಉದ್ಘಾಟನಾ ಭಾಷಣ ಮಾಡಿ, ಜಾತಿ, ಪಕ್ಷ ಬಿಟ್ಟು ಧರ್ಮ ಉಳಿಸಲು ನಾವು ಪ್ರತಿಜ್ಞೆ ಮಾಡುತ್ತಿದ್ದೇವೆ. 1008 ಸ್ವಾಮೀಜಿಗಳೂ ಕುಳಿತಿದ್ದಾರೆ. ಅವರು ಸ್ವಾಮೀಜಿಗಳಲ್ಲ, ದೇವರು. ಬೇರೆಯವರಂತೆ ನಾವು ಜಾತಿ ಮಾಡಿದರೆ ಸಣ್ಣವರಾಗುತ್ತೇವೆ ಎಂದರು.

ಸದಾನಂದಗೌಡ ಸಿಎಂ ಇದ್ದಾಗ 109 ಕೋಟಿ, ಬಸವರಾಜ ಬೊಮ್ಮಾಯಿ ಸಿಎಂ ಇದ್ದಾಗ ಮಠಗಳಿಗೆ 129 ಕೋಟಿ ಅನುದಾನ ಕೊಟ್ಟಿದ್ದಾರೆ. ವರ್ಷಗಳಿಂದಿರುವ ನಮ್ಮ ಜಮೀನುಗಳನ್ನು ವಕ್ಫ್ ಆಸ್ತಿ ಮಾಡಿಕೊಂಡಿದ್ದರು. ವಕ್ಫ್ ಬೋರ್ಡ್ ಉಲ್ಲೇಖವನ್ನು ಪಹಣಿಯಿಂದ ತೆಗೆಯುವರೆಗೂ ನಮ್ಮ ಹೋರಾಟ. ಸಾಧು-ಸಂತರ ಮಾರ್ಗದರ್ಶನದಲ್ಲಿ ಕ್ರಾಂತಿವೀರ ಬ್ರಿಗೇಡ್ ಕಟ್ಟಿದ್ದೇವೆ. ರಾಜ್ಯ, ದೇಶದಲ್ಲಿ ಹಿಂದುತ್ವ ಉಳಿಸುತ್ತೇವೆ ಎಂದು ಈಶ್ವರಪ್ಪ ಘೋಷಿಸಿದರು.

ಬಸವನಬಾಗೇವಾಡಿಯಲ್ಲಿ ಕ್ರಾಂತಿವೀರ ಬ್ರಿಗೇಡ್‌ಗೆ ಚಾಲನೆ ದೊರೆಯಿತು. ಮಾಜಿ ಡಿಸಿಎಂ ಕೆ.ಎಸ್.ಈಶ್ವರಪ್ಪ ಕನ್ನೇರಿ ಮಠದ ಸ್ವಾಮೀಜಿ ಸೇರಿ ಸಾವಿರಕ್ಕೂ ಹೆಚ್ಚು ಸಾಧು-ಸಂತರು, ಸಹಸ್ರಾರು ಜನರು ಪಾಲ್ಗೊಂಡಿದ್ದರು.

ಚಾಮರಾಜಪೇಟೆಯಲ್ಲಿ ಗೋವಿನ ಕೆಚ್ಚಲು ಕತ್ತರಿಸಿದ್ದಾರೆ. ಹಸುವನ್ನು ಕಡಿದು ಮಾಂಸ ಮಾರಾಟ ಮಾಡುತ್ತಿದ್ದಾರೆ. ಗೋಮಾತೆಗೆ ಆಗುತ್ತಿರುವ ಅನ್ಯಾಯ ನೋಡಿಕೊಂಡು ಕುಳಿತರೆ ಬದುಕಿದ್ದರೂ ಸತ್ತಂತೆ. ಯಾರಾದರೂ ಗೋವು ಕಡಿದರೆ ಅವರ ಕೈಯನ್ನು ಕಡಿಯುತ್ತೇವೆಂದು ತೀರ್ಮಾನ ಮಾಡೋಣ. ಗೋ ರಕ್ಷಣೆಯಾಗಬೇಕು, ಅತ್ಯಾಚಾರ ನಿಲ್ಲಿಸಬೇಕು.

- ಕೆ.ಎಸ್.ಈಶ್ವರಪ್ಪ ಮಾಜಿ ಡಿಸಿಎಂ

ಹಿಂದೂಗಳ ಸಂಖ್ಯೆ ಕುಸಿತಕ್ಕೆ ಕಳವಳ: ಕನ್ನೇರಿ ಮಠದ ಕಾಡಸಿದ್ದೇಶ್ವರ ಸ್ವಾಮೀಜಿ ಆಶೀರ್ವಚನ ನೀಡಿ, ಇತ್ತೀಚೆಗೆ ದೇಶ, ಧರ್ಮ, ಹೃದಯಕ್ಕೆ ಆಘಾತಗಳಾಗುತ್ತಿವೆ. ಇದನ್ನು ತಪ್ಪಿಸಲು ಒಂದು ಚಳವಳಿ ಉಂಟಾಗಿದೆ. ಸಾಂಸ್ಕೃತಿಕ ಚಳವಳಿ ಉಳಿಸಬೇಕಿದೆ. ಶೇ.80ರಷ್ಟು ಸಮಾಜಕ್ಕಾಗಿ ಕೆಲಸ, ಶೇ.20ರಷ್ಟು ರಾಜಕೀಯ ಮಾಡಿದರೆ ಉತ್ತಮ ರಾಜಕಾರಣ ಆಗಬಹುದು. ಜನಹಿತ ಕೆಲಸ ಮಾಡುವವರೇ ಜನನಾಯಕ ಎಂದರು.

ಪಾಕಿಸ್ತಾನ ವಿಭಜನೆಯಾದಾಗ 35 ಸಾವಿರ ಜನರು ಭಾರತಕ್ಕೆ ಬರುವ ವೇಳೆ ಗಡಿಯೊಳಗೆ ಬಂದವರು ಕೇವಲ 3 ಸಾವಿರ ಮಾತ್ರ. ಹಿಂದೂ ಮಹಿಳೆಯರು, ಯುವತಿಯರ ಮೇಲೆ ಅತ್ಯಾಚಾರ ಮಾಡಿದರು. ಇದನ್ನು ತಪ್ಪಿಸೋಕೆ ವಿಷ ಉಣ್ಣುವಂತಾಗಿತ್ತು. ಈಗ ಅಂತಹ ಪರಿಸ್ಥಿತಿ ಬರುವ ಸಾಧ್ಯತೆ ಇದೆ. ಇದನ್ನು ಈಶ್ವರಪ್ಪ ಕಂಡಿದ್ದಾರೆ, ಇದೆಲ್ಲ ಹಿಂದಿನಿಂದಲೂ ಬಂದಿದೆ. ತುಷ್ಟೀಕರಣ ಪರಿಣಾಮ ಗಂಭೀರವಾಗಲಿದೆ ಎಂದು ಸ್ವಾಮೀಜಿ ಎಚ್ಚರಿಕೆ ಕೊಟ್ಟರು.

→ 8

ಎಎಪಿ, ಬಿಜೆಪಿ, ಕಾಂಗ್ರೆಸ್ ತ್ರಿಕೋನ ಸ್ಪರ್ಧೆ | ಹ್ಯಾಟ್ರಿಕ್ ಸಾಧನೆಗೆ ಎಎಪಿ ಭಾರೀ ಯತ್ನ | ಅಧಿಕಾರಕ್ಕಾಗಿ ಬಿಜೆಪಿ, ಕಾಂಗ್ರೆಸ್ ಪ್ರಯತ್ನ

ದೆಹಲಿ ವಿಧಾನಸಭೆ: ಇಂದು ಮತದಾನ

ದೆಹಲಿ: 70 ಸದಸ್ಯ ಬಲದ ದೆಹಲಿ ವಿಧಾನಸಭೆಗೆ ಒಂದೇ ಹಂತದಲ್ಲಿ ಚುನಾವಣೆ ನಡೆಯುತ್ತಿದ್ದು, ಬುಧವಾರ ಬೆಳಗ್ಗೆ 7ರಿಂದ ಸಂಜೆ 6ವರೆಗೂ ಮತದಾನ ನಡೆಯಲಿದೆ. ಕೇಂದ್ರಾಡಳಿತ ಪ್ರದೇಶ ದೆಹಲಿ ವ್ಯಾಪ್ತಿಯ 1.55 ಕೋಟಿ ಮತದಾರರು ಸಾಂವಿಧಾನಿಕ ಹಕ್ಕು ಚಲಾಯಿಸಲಿದ್ದಾರೆ. ಫೆ.8ಕ್ಕೆ ಮತ ಎಣಿಕೆ ನಡೆದು ಫಲಿತಾಂಶ ಪ್ರಕಟವಾಗಲಿದೆ.

ಈ ಬಾರಿ ಆಮ್ ಆದ್ಮಿ ಪಕ್ಷ(ಎಎಪಿ) ಮತ್ತು ಬಿಜೆಪಿ ನಡುವೆ ನಿಕಟ ಸ್ಪರ್ಧೆಯಿದ್ದರೆ, ಕಾಂಗ್ರೆಸ್ ಪಕ್ಷದ ಪ್ರಬಲ ಉಪಸ್ಥಿತಿಯು ಚುನಾವಣೆಯನ್ನು ತ್ರಿಕೋನ ಸ್ಪರ್ಧೆಯ ಕಣವನ್ನಾಗಿಸಿದೆ. ಚುನಾವಣಾ ಬಹಿರಂಗ ಪ್ರಚಾರದ ಕೊನೆಯ ದಿನವಾದ ಸೋಮವಾರ ಮೂರೂ ಪಕ್ಷಗಳು ದಿಗ್ಗಜ ನಾಯಕರನ್ನು ಪ್ರಚಾರ ಕಾರ್ಯದಲ್ಲಿ ತೊಡಗಿಸಿದ್ದವು.

ಗೃಹ ಸಚಿವ ಅಮಿತ್ ಶಾ, ರಕ್ಷಣಾ ಸಚಿವ ರಾಜನಾಥ್ ಸಿಂಗ್, ಜೆ.ಪಿ.ನಡ್ಡಾ ಮತ್ತು ಬಿಜೆಪಿ ಆಡಳಿತದ ರಾಜ್ಯಗಳ ಮುಖ್ಯಮಂತ್ರಿಗಳು ಬಿಜೆಪಿ ಅಭ್ಯರ್ಥಿಗಳ ಪರ ಸೋಮವಾರ ದಿನವಿಡೀ ಪ್ರಚಾರ ನಡೆಸಿದರು.

ಎಎಪಿ ನಾಯಕ ಅರವಿಂದ್ ಕೇಜ್ರಿವಾಲ್ ಸ್ವತಃ ನವದೆಹಲಿ ವಿಧಾನಸಭಾ ಕ್ಷೇತ್ರದ ಅಭ್ಯರ್ಥಿಯಾಗಿದ್ದರೂ ಹಾಲಿ ಸಿಎಂ ಅತಿಶಿ ಅವರ ಕ್ಷೇತ್ರದ ವಿವಿಧೆಡೆ ಸೋಮವಾರ 3 ರ‍್ಯಾಲಿ ನಡೆಸಿದರು. ಕಾಂಗ್ರೆಸ್ ಅಭ್ಯರ್ಥಿಗಳ ಪರವಾಗಿ ರಾಹುಲ್ ಗಾಂಧಿ ಮತ್ತು ಪ್ರಿಯಾಂಕಾ ಗಾಂಧಿ ಪ್ರಚಾರ ಕಣದಲ್ಲಿದ್ದರು. ಕಲ್ಕಾಜಿ ಮತ್ತು ಕಸ್ತೂರ್‌ಬಾ ನಗರ ಕ್ಷೇತ್ರಗಳಲ್ಲಿ ಅಣ್ಣ-ತಂಗಿ ರೋಡ್ ಶೋ ನಡೆಸಿದರು.

- ದೆಹಲಿ ವಿಧಾನಸಭಾ ಕ್ಷೇತ್ರ 70
- ಒಟ್ಟು ಮತದಾರರು 1.56 ಕೋಟಿ
- ಮತಗಟ್ಟೆಗಳ ಸಂಖ್ಯೆ 13,766
- ಪುರುಷ ಮತದಾರರು 83.76 ಲಕ್ಷ
- ಮಹಿಳಾ ಮತದಾರರು 72.36 ಲಕ್ಷ
- ತೃತೀಯ ಲಿಂಗಿ ಮತದಾರರು 1,267
- ವಿಶೇಷಚೇತನರಿಗೆ ಮತಗಟ್ಟೆ 733

ಸಮಾಚಾರ ಸಣ್ಣದಲ್ಲ

ಏರ್ ಶೋ: ದುಪ್ಪಟ್ಟು ಹಣ ನೀಡಲು ಬೇಡಿಕೆ

ಬೆಂಗಳೂರು: ಯಲಹಂಕ ವಾಯುನೆಲೆಯಲ್ಲಿ ಏರ್ ಶೋಗೆ ದಿನಗಣನೆ ಆರಂಭವಾಗಿದ್ದು, ಸುತ್ತಮುತ್ತಲಿನ ಪ್ರದೇಶದಲ್ಲಿ ಬಾಡಿಗೆಗೆ ರೂಮ್‌ಗಳು ಹಾಗೂ ಐಷಾರಾಮಿ ಹಾಗೂ ಸಾಮಾನ್ಯ ಕಾರುಗಳೂ ಸಿಗದಂತಾಗಿದೆ. ಫೆ.10ರಿಂದ 14ರವರೆಗೆ ಏರ್ ಶೋ ಹಿನ್ನೆಲೆ ನಗರದಲ್ಲಿರುವ ಟ್ರಾವೆಲ್ಸ್‌ಗಳಲ್ಲಿ ಐಷಾರಾಮಿ ಕಾರುಗಳು ಸೇರಿದಂತೆ ಎಲ್ಲಾ ಮಾದರಿಯ ಕಾರುಗಳನ್ನು ಕಾಯ್ದಿರಿಸಲಾಗಿದ್ದು, ಜತೆಗೆ ಸುತ್ತಮುತ್ತಲಿನ ಫೈವ್ ಸ್ಟಾರ್, ಥ್ರೀ ಸ್ಟಾರ್ ಸೇರಿದಂತೆ ಎಲ್ಲಾ ಮಾದರಿಯ ಹೋಟೆಲ್ ಲಾಡ್ಜ್, ರೂಮ್‌ಗಳನ್ನು ಈಗಾಗಲೇ ಕಾಯ್ದಿರಿಸಲಾಗಿದೆ.

ನೇಮಕಕ್ಕೆ ತಡೆ ಇಲ್ಲ

ಬೆಂಗಳೂರು: ಕರ್ನಾಟಕ ರಾಜ್ಯ ಮಾಹಿತಿ ಆಯೋಗಕ್ಕೆ ಮುಖ್ಯ ಆಯುಕ್ತರ ನೇಮಕಾತಿ ಹಾಗೂ ಆಯುಕ್ತರ ಪ್ರಮಾಣವಚನ ಸ್ವೀಕಾರ ಸಮಾರಂಭಕ್ಕೆ ತಡೆ ನೀಡಲು ಹೈಕೋರ್ಟ್ ನಿರಾಕರಿಸಿತು. ಆದರೆ ಮಾಹಿತಿ ಮುಖ್ಯ ಆಯುಕ್ತರು ಮತ್ತು ಮಾಹಿತಿ ಆಯುಕ್ತರ ನೇಮಕಾತಿ ತನ್ನ ಅಂತಿಮ ಆದೇಶಕ್ಕೆ ಒಳಪಟ್ಟಿರುತ್ತದೆ ಎಂದು ಆದೇಶಿಸಿದೆ. ಮಾಹಿತಿ ಆಯೋಗಕ್ಕೆ ಆಯುಕ್ತರನ್ನು ನೇಮಿಸಿ ರಾಜ್ಯ ಸರಕಾರ 2025ರ ಜನವರಿ 30ರಂದು ಹೊರಡಿಸಿರುವ ಆದೇಶ ರದ್ದುಪಡಿಸುವಂತೆ ಕೋರಿ ಕೆ. ಮಲ್ಲಿಕಾರ್ಜುನ ರಾಜು ಸಲ್ಲಿಸಿದ್ದ ಅರ್ಜಿಯನ್ನು ನ್ಯಾ. ಆರ್. ದೇವದಾಸ್ ಅವರಿದ್ದ ಏಕಸದಸ್ಯ ಪೀಠ ವಿಚಾರಣೆ ನಡೆಸಿತು. ಈ ಸಂದರ್ಭದಲ್ಲಿ ರಾಜ್ಯ ಸರಕಾರ ಹಾಗೂ ನೂತನವಾಗಿ ನೇಮಕವಾಗಿರುವ ಎಲ್ಲ ಮಾಹಿತಿ ಆಯುಕ್ತರಿಗೆ ನೋಟಿಸ್ ಜಾರಿಗೊಳಿಸಿದೆ. ಅರ್ಜಿಗೆ ಆಕ್ಷೇಪಣೆ ಸಲ್ಲಿಸುವಂತೆ ಪ್ರತಿವಾದಿಗಳಿಗೆ ಸೂಚಿಸಿದ ಪೀಠ, ವಿಚಾರಣೆಯನ್ನು ಫೆ.10ಕ್ಕೆ ಮುಂದೂಡಿತು. ವಿಚಾರಣೆ ವೇಳೆ ಅರ್ಜಿದಾರರ ಪರ ವಕೀಲರು ವಾದ ಮಂಡಿಸಿ, ರಾಜ್ಯ ಮುಖ್ಯ ಮಾಹಿತಿ ಆಯುಕ್ತರು ಹಾಗೂ ಮಾಹಿತಿ ಆಯುಕ್ತರ ನೇಮಕಾತಿ ಪ್ರಕ್ರಿಯೆಯಲ್ಲಿ ಸಲ್ಲಿಕೆಯಾಗುವ ಅರ್ಜಿಗಳ ಪರಿಶೀಲನೆಗೆ ಶೋಧನಾ ಸಮಿತಿ ರಚಿಸಬೇಕು. ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ಆಯ್ಕೆ ಸಮಿತಿಯ ಮುಂದೆ ಮಂಡಿಸಬೇಕು ಎಂದು ಅಂಜಲಿ ಭಾರಾಧ್ವಾಜ್ ಪ್ರಕರಣದಲ್ಲಿ ಸುಪ್ರೀಂಕೋರ್ಟ್ ಸ್ಪಷ್ಟ ನಿರ್ದೇಶನ ನೀಡಿದೆ.

ರಾಜ್ಯಸಭಾ ಸದಸ್ಯೆ ಹಾಗೂ ಇಬ್ಬರು ಯಶಸ್ವಿ ಮಕ್ಕಳ ತಾಯಿಯಾಗಿರುವ ಇನ್ಫೋಸಿಸ್ ಫೌಂಡೇಶನ್‌ನ ಸುಧಾ ಮೂರ್ತಿ ಹಾಗೂ ಅವರ ಮಗಳು ಅಕ್ಷತಾ ಮೂರ್ತಿ ಅವರ ನಡುವಿನ ಆಕರ್ಷಕ ಸಂವಾದಕ್ಕೆ ಈ ಗೋಷ್ಠಿ ಸಾಕ್ಷಿಯಾಯಿತು. ವಿಷಯ: ಪೋಷಕರು ಹಾಗೂ ಮಕ್ಕಳ ಸಂಬಂಧ, ಅವರು ಹಂಚಿಕೊಳ್ಳುವ ಮೌಲ್ಯಗಳು, ಜೀವನದ ದೃಷ್ಟಿಕೋನಗಳು ಇತ್ಯಾದಿ.

ಬರ್ತ್‌ಡೇ ಪಾರ್ಟಿಗಾಗಿ ಉಳಿಸಿದ ಹಣ ದಾನ ಮಾಡುವಂತೆ ಮಗಳಿಗೆ ಹೇಳಿದ್ರಂತೆ ಸುಧಾ ಮೂರ್ತಿ!

ಹರೀಶ್ ಕೇರ

ಜೈಪುರ: ನನ್ನ ಬಾಲ್ಯದಲ್ಲಿ ಬರ್ತ್‌ಡೇ ಪಾರ್ಟಿಗಾಗಿ ನಾನು ಉಳಿತಾಯ ಮಾಡಿದ ಹಣವನ್ನು ದಾನ ಮಾಡುವಂತೆ ನೀವು ಹೇಳಿದಾಗ ನನಗೆ ಬೇಸರವಾಗಿತ್ತು. ಆದರೆ ಅದೇ ನನ್ನಲ್ಲಿ ಮುಂದೆ ಸೇವೆಯ ಮೌಲ್ಯವನ್ನು ನನ್ನಲ್ಲಿ ರೂಢಿಸಿತು. ಅದು ಸಿಎಸ್‌ಆರ್ ಪರಿಕಲ್ಪನೆ ಕಡ್ಡಾಯವಾಗಿಲ್ಲದ ಕಾಲವಾಗಿತ್ತು. ನಿನ್ನ ಕೆಲಸ ಮಾಡು ಹಾಗೂ ಫಲದ ಬಗ್ಗೆ ಚಿಂತೆ ಮಾಡದಿರು ಎಂದು ನೀವು ನನಗೆ ಕಲಿಸಿದಿರಿ ಎಂದು ಉದ್ಯಮಿ, ನಾರಾಯಣ ಮೂರ್ತಿ ಅವರ ಪುತ್ರಿ ಅಕ್ಷತಾ ಮೂರ್ತಿ ಅವರು ತಮ್ಮ ತಾಯಿ ಸುಧಾ ಮೂರ್ತಿ ಅವರಿಗೆ ಹೇಳಿದರು.

ಇದು ನಡೆದದ್ದು ಜೈಪುರ ಲಿಟರೇಚರ್ ಫೆಸ್ಟಿವಲ್‌ನಲ್ಲಿ ನಡೆದ ಗೋಷ್ಠಿಯಲ್ಲಿ. ರಾಜ್ಯಸಭಾ ಸದಸ್ಯೆ ಹಾಗೂ ಇಬ್ಬರು ಯಶಸ್ವಿ ಮಕ್ಕಳ ತಾಯಿಯಾಗಿರುವ ಇನ್ಫೋಸಿಸ್ ಫೌಂಡೇಶನ್‌ನ ಸುಧಾ ಮೂರ್ತಿ ಹಾಗೂ ಅವರ ಮಗಳು ಅಕ್ಷತಾ ಮೂರ್ತಿ ಅವರ ನಡುವಿನ ಆಕರ್ಷಕ ಸಂವಾದಕ್ಕೆ ಈ ಗೋಷ್ಠಿ ಸಾಕ್ಷಿಯಾಯಿತು.

ವಿಷಯ: ಪೋಷಕರು ಹಾಗೂ ಮಕ್ಕಳ ಸಂಬಂಧ, ಅವರು ಹಂಚಿಕೊಳ್ಳುವ ಮೌಲ್ಯಗಳು, ಜೀವನದ ದೃಷ್ಟಿಕೋನಗಳು ಇತ್ಯಾದಿ. ಸ್ವತಃ ಸುಧಾ ಮೂರ್ತಿ ಅಳಿಯ, ಬ್ರಿಟನ್ ಮಾಜಿ ಪ್ರಧಾನಿ ರಿಷಿ ಸುನಕ್, ಪತಿ ನಾರಾಯಣ ಮೂರ್ತಿ ಈ ಸಂವಾದ ನಡೆದಾಗ ಅಲ್ಲಿದ್ದರು.

ಕೆರಿಯರ್ ಬಗ್ಗೆ ಫೋಕಸ್ ಮಾಡುವುದು ಹಾಗೂ ಮಕ್ಕಳನ್ನು ಬೆಳೆಸುವುದು ಇದೆರಡರ ನಡುವೆ ಬ್ಯಾಲೆನ್ಸ್ ಹೇಗೆ ಎಂಬುದನ್ನು ಸುಧಾ ಮೂರ್ತಿ ವಿವರಿಸಿದರು. ನನ್ನ ತಂದೆ ವೈದ್ಯರಾಗಿದ್ದರು. ಅವರಿಗೆ ಆಸ್ಪತ್ರೆಯೇ ದೇವಾಲಯವಾಗಿತ್ತು. ಕೆಲಸದಲ್ಲಿ ಸಂಪೂರ್ಣವಾಗಿ ಹೇಗೆ ಸಮರ್ಪಿಸಿಕೊಳ್ಳಬೇಕು ಎಂಬುದನ್ನು ಅವರಿಂದ ನಾನು ಕಲಿತಿದ್ದೇನೆ ಎಂದು ಸುಧಾ ಮೂರ್ತಿ ಹೇಳಿದರು.

ನಾನು ಕೂಡ ಮಕ್ಕಳಿಗೆ ಸಮಯ ಕೊಡುವುದಕ್ಕಾಗಿ ನನ್ನ ಕೆಲಸವನ್ನು ಬಿಟ್ಟೆ. ತಾಯಿ ತನ್ನ ಮಕ್ಕಳಿಗೆ ನಡವಳಿಕೆಯ ಮೂಲಕ ನೈತಿಕ ಮೌಲ್ಯಗಳನ್ನು ಕಲಿಸಬೇಕು ಎಂದು ಸುಧಾ ಮಕ್ಕಳಲ್ಲಿ ಮೌಲ್ಯಗಳನ್ನು ತುಂಬುವುದರ ಮಹತ್ವವನ್ನು ಒತ್ತಿ ಹೇಳಿದರು. ಇದಕ್ಕೆ ಸಮ್ಮತಿಸಿದ ಅಕ್ಷತಾ, ಎರಡು ಕೆಲಸಗಳನ್ನು ಏಕಕಾಲದಲ್ಲಿ ಮಾಡಲು ಸಾಧ್ಯವಿಲ್ಲ. ಆದ್ದರಿಂದ ಪೋಷಕರು ತಮ್ಮ ಮಕ್ಕಳಿಗೆ ಮೊದಲ ಆದ್ಯತೆ ನೀಡಬೇಕು ಎಂದರು.

ತಮ್ಮ ಮಕ್ಕಳ ಪೋಷಣೆ ಪಯಣದಲ್ಲಿ ಪತಿ ನಾರಾಯಣ ಮೂರ್ತಿ ಅವರ ಬೆಂಬಲವನ್ನು ಶ್ಲಾಘಿಸಿದ ಸುಧಾ ಮೂರ್ತಿ, ಯಶಸ್ವಿ ಮಹಿಳೆಯ ಹಿಂದೆ ಒಬ್ಬ ಬುದ್ಧಿವಂತ ವ್ಯಕ್ತಿ ಇರುತ್ತಾನೆ. ನನ್ನ ಪತಿ ಯಾವಾಗಲೂ ನನ್ನನ್ನು ಬೆಂಬಲಿಸಿದ್ದಾರೆ ಮತ್ತು ನಾನು ಮುಂದುವರಿಯಲು ಸಹಾಯ ಮಾಡಿದ್ದಾರೆ ಎಂದು ಹೇಳಿದರು.

ಅಕ್ಷತಾ ಮೂರ್ತಿ ತಮ್ಮ ಪೋಷಕರಿಗೆ ಕೃತಜ್ಞತೆ ಸಲ್ಲಿಸಿದರು. ನೀವು ಮತ್ತು ಪಾಪಾ ನನಗೆ ರೋಲ್ ಮಾಡೆಲ್ ಆಗಿದ್ದೀರಿ. ನೀವಿಬ್ಬರೂ ಯಾವಾಗಲೂ ಒಬ್ಬರನ್ನೊಬ್ಬರು ಬೆಂಬಲಿಸಿದ್ದೀರಿ ಎಂದು ಹೇಳಿದರು. ಇದಕ್ಕೆ ಆತ್ಮೀಯವಾಗಿ ಪ್ರತಿಕ್ರಿಯಿಸಿದ ಸುಧಾ ಮೂರ್ತಿ, ನನ್ನ ಮಕ್ಕಳು ಉತ್ತಮ ಪ್ರಜೆಗಳಾಗಬೇಕು ಎಂದು ನಾನು ಸದಾ ಬಯಸಿದ್ದೆ. ಮುಂದೊಂದು ದಿನ ನಿನ್ನ ಪತಿ ಮತ್ತು ಮಕ್ಕಳು ನಿನ್ನ ಬಗ್ಗೆ ಹೆಮ್ಮೆ ಪಡುವ ಕಾಲವನ್ನು ನೀವೂ ನೋಡುತ್ತೀರಿ ಎಂದು ಮಗಳು ಅಕ್ಷತಾಗೆ ಹೇಳಿದರು.

ಚರ್ಚೆಯಲ್ಲಿ ಸುಧಾ ಮೂರ್ತಿ ಅವರು ಜೀವನದ ಸಮಗ್ರತೆಯ ಬಗ್ಗೆ ತಮ್ಮ ಆಲೋಚನೆಗಳನ್ನು ಹಂಚಿಕೊಂಡರು. 74ರ ಹರೆಯದಲ್ಲೂ ನಾನೊಬ್ಬ ಆದರ್ಶವಾದಿ. ನನ್ನ ಮಕ್ಕಳಿಗೆ ಮೊದಲು ನೀವು ಒಳ್ಳೆಯವನಾಗಬೇಕು, ಹೃದಯವನ್ನು ಸ್ವಚ್ಛವಾಗಿಟ್ಟುಕೊಳ್ಳಬೇಕು, ನಂಬಿದ್ದನ್ನು ಹೇಳು, ಹೇಳಿದ್ದನ್ನು ಮಾಡು ಎಂದು ಹೇಳಿಕೊಟ್ಟೆ ಎಂದರು.

ನಾನು ಭಾರತದವಳು ಮತ್ತು ಭಾರತದಲ್ಲಿ ಕೆಲಸ ಮಾಡುತ್ತೇನೆ. ನನ್ನ ಮೊಮ್ಮಕ್ಕಳಿರುವುದರಿಂದ ನಾನು ಲಂಡನ್‌ಗೆ ಹೋಗುತ್ತೇನೆ. ಅದನ್ನು ಮೀರಿ ನನಗೆ ವಿದೇಶಗಳೊಂದಿಗೆ ಯಾವುದೇ ಸಂಬಂಧವಿಲ್ಲ ಎಂದು ಸುಧಾ ಹೇಳಿದರು.

ಅತಿಯಾದ ಸ್ಪರ್ಧೆಯ ಚಿಂತೆ ಮೀರಿ ಮುನ್ನಡೆಯಲು ಮತ್ತು ಮಕ್ಕಳಲ್ಲಿ ಸಹಕಾರವನ್ನು ಪ್ರೋತ್ಸಾಹಿಸಲು ಸುಧಾ ಮೂರ್ತಿ ಪೋಷಕರಿಗೆ ಸಲಹೆ ನೀಡಿದರು. ಪೋಷಕರು ಯಾವಾಗಲೂ ತಮ್ಮ ಮಕ್ಕಳಿಗೆ ಕಷ್ಟಪಟ್ಟು ಓದಿ ಉತ್ತಮ ಅಂಕಗಳನ್ನು ಗಳಿಸಲು ಹೇಳುತ್ತಾರೆ. ನೆರೆಹೊರೆಯವರ ಮಗು ಉತ್ತಮ ಅಂಕ ಗಳಿಸಿದರೆ ಖಿನ್ನತೆಗೆ ಒಳಗಾಗುತ್ತಾರೆ. ಆದರೆ ಬದುಕು ಮೂರು ಗಂಟೆಯ ಚಲನಚಿತ್ರವಲ್ಲ. ಮಕ್ಕಳನ್ನು ಮೊಬೈಲ್ ಫೋನ್ಗಳ ಪ್ರಪಂಚದಿಂದ ಹೊರತನ್ನಿ. ಆದರೆ ಮೊದಲು ನೀವೇ ಅದರಿಂದ ಹೊರಬನ್ನಿ ಎನ್ನುವ ಮೂಲಕ ಪೋಷಕರು ಮತ್ತು ಮಕ್ಕಳ ಸ್ಕ್ರೀನ್ ಟೈಮ್ ಕಡಿಮೆ ಮಾಡುವ ಅಗತ್ಯವನ್ನು ಒತ್ತಿ ಹೇಳಿದರು.

ಕ್ಯೂಆರ್ ಕೋಡ್‌ನಲ್ಲೇ ನಮ್ಮ ಕ್ಲಿನಿಕ್ ಮಾಹಿತಿ: ಬಿಬಿಎಂಪಿ ಚಿಂತನೆ

ಬೆಂಗಳೂರು: ಬಿಬಿಎಂಪಿಯ ನಮ್ಮ ಕ್ಲಿನಿಕ್‌ಗಳು ಸರಿಯಾಗಿ ಸೇವೆ ನೀಡುವುದಿಲ್ಲ ಎನ್ನುವ ಆರೋಪದ ಬೆನ್ನಲ್ಲೇ ಪಾಲಿಕೆಯು ನಮ್ಮ ಕ್ಲಿನಿಕ್ ಗಳ ಬಗ್ಗೆ ಜನರಲ್ಲಿ ಅರಿವು ಮೂಡಿಸಲು ಕ್ರಮ ಕೈಗೊಂಡಿದ್ದು, ಕ್ಯೂ ಆರ್ ಕೋಡ್ ಮೂಲಕ ಮಾಹಿತಿ ನೀಡಲು ಮುಂದಾಗಿದೆ.

ನಮ್ಮ ಕ್ಲಿನಿಕ್‌ಗಳ ಬಗ್ಗೆ ಜನರಲ್ಲಿ ಅರಿವು ಮೂಡಿಸುವುದರ ಜತೆಗೆ, ಅವುಗಳ ಸೇವೆ ಸುಧಾರಿಸುವ ನಿಟ್ಟಿನಲ್ಲಿ ಮಹತ್ವದ ಕ್ರಮ ಕೈಗೊಳ್ಳಲು ಬಿಬಿಎಂಪಿ ಮುಂದಾಗಿದ್ದು, ಇದಕ್ಕಾಗಿ ಹೊಸ ತಂತ್ರವನ್ನೂ ಪಾಲಿಕೆ ಅನುಸರಿಸಲಿದೆ. ಸದ್ಯ ಬೆಂಗಳೂರಿನ ಎಂಟು ವಲಯಗಳಲ್ಲಿ ನಮ್ಮ ಕ್ಲಿನಿಕ್‌ಗಳನ್ನು ಜನರ ಬಳಕೆಗೆ ಸಿಗುವಂತೆ ಮಾಡಲು ಚಿಂತನೆ ನಡೆಸಿರುವ ಬಿಬಿಎಂಪಿಯ ಆರೋಗ್ಯ ವಿಭಾಗ, ಪ್ರತಿ ವಾರ್ಡ್‌ನಲ್ಲೂ ಕ್ಯೂಆರ್ ಕೋಡ್ ಅಳವಡಿಸಲು ಸಜ್ಜಾಗಿದೆ.

ಸೌಲಭ್ಯಗಳ ಬಗ್ಗೆ ಸಮಗ್ರ ಮಾಹಿತಿ: ನಮ್ಮ ಕ್ಲಿನಿಕ್‌ಗಳ ಬಗ್ಗೆ ಜನರಿಗೆ ಅರಿವು ಕೂಡ ಕಡಿಮೆ ಇರುವುದರಿಂದ ಜನರು ಅವುಗಳನ್ನು ಬಳಕೆ ಮಾಡಲು ಮುಂದಾಗುತ್ತಿಲ್ಲ. ಈ ಹಿನ್ನೆಲೆ ಕ್ಯೂಆರ್ ಕೋಡ್ ಮೂಲಕ ಆಯಾ ವಾರ್ಡ್ ಗಳಲ್ಲಿ ನಮ್ಮ ಕ್ಲಿನಿಕ್ ಎಲ್ಲಿದೆ, ಅಲ್ಲಿ ಸಿಗುವ ಸೌಲಭ್ಯಗಳ ಬಗ್ಗೆ ಜನರಿಗೆ ಮಾಹಿತಿ ಒದಗಿಸಲು ಪಾಲಿಕೆ ಸಿದ್ಧತೆ ನಡೆಸಿದೆ. ಬಿಬಿಎಂಪಿಯ ವಾರ್ಡ್‌ಗಳಲ್ಲಿರುವ ನಮ್ಮ ಕ್ಲಿನಿಕ್‌ಗಳಲ್ಲಿ ಏನೆಲ್ಲ ಸೌಲಭ್ಯ ಸಿಗಲಿದೆ ಎಂಬ ಬಗ್ಗೆ ಪಾಲಿಕೆ ಜನರಿಗೆ ಮಾಹಿತಿ ಒದಗಿಸಲಿದ್ದು, ಕ್ಯೂಆರ್ ಕೋಡ್ ಜತೆಗೆ ಆಯಾ ವಲಯದಲ್ಲಿರುವ ನಮ್ಮ ಕ್ಲಿನಿಕ್‌ಗಳಲ್ಲಿ ಇರುವ ವೈದ್ಯರ ಮಾಹಿತಿ, ವೈದ್ಯರ ಫೋಟೋವನ್ನು ಕೂಡ ಪ್ರಕಟಿಸುವ ಮೂಲಕ ಜನರಿಗೆ ನಮ್ಮ ಕ್ಲಿನಿಕ್ ಬಳಕೆ ಮಾಡಿಕೊಳ್ಳುವಂತೆ ಜಾಗೃತಿ ನೀಡಲು ಮುಂದಾಗಿದೆ. ಈಗಾಗಲೇ ನಮ್ಮ ಕ್ಲಿನಿಕ್‌ಗಳಲ್ಲಿ ವಾರಕ್ಕೊಮ್ಮೆ ಯೋಗ ನಡೆಸುವ ಮೂಲಕ ಜನರ ಗಮನ ಸೆಳೆಯಲು ಕೂಡ ಪಾಲಿಕೆ ಯೋಜನೆ ರೂಪಿಸಿತ್ತು.

BEFORE THE KARNATAKA APPELLATE TRIBUNAL AT BENGALURU
APPEAL No.303/2023
APPELLANT : SMT. SHEELA B.R.
W/o. Sri Vishwanath G.S, aged about 53 years, Agriculturist, Residing at Vidyanagar III Cross, Gubbi Town, Tumkuru District -V/s-
RESPONDENTS : THE DEPUTY COMMISSIONER & OTHERS
RESPONDENT NOS.4, 8, 9, 10 & 13
4.SRI. H.S. SUBBA RAO,
S/o. Late H.N.Shankaranayanappa, aged about 60 Years, Residing at No.20/1, Banashankari III Stage, Kathriguppe Village, Near Maramma Temple, Bengaluru-560 085
8. SMT. SUNANDAMMA,
D/o Late Anantharamaiah, W/o. Sri Subbanna, Aged about 72 years,
9. SMT. PRABHAMANI, D/o Late Anantharamaiah, W/o. Sri Krishnamurthy, Aged about 69 years.
10. SMT. SHAKUNTHALA,
D/o. Sri Anantharamaiah, Aged about 70 years, Respondents No.8 to 10 are Residing at Cheluru, Gubbi Taluk,Tumkuru District-572 117.
13. SMT. NAGALAKSHMI, D/o Late Ananatharamaiah, W/o. K.V. Venkatesh, Aged about 59 years, Residing at Cheluru, Gubbi Taluk, Tumkur District-572 117.
NOTICE TO RESPONDENT NOS. 4, 8, 9, 10 & 13
WHEREAS, the Appellant being aggrieved by the order of the Deputy Commissioner, Tumkur, in Case No.INA(A)-01/2018-19 dated 03.03.2023 in respect of land bearing Sy.No.243/2, measuring 21 guntas, situated at Cheluru Village, Cheluru Hobli, Gubbi Taluk, Tumkur District and you are hereby noticed to appear before this Hon'ble Tribunal Court Hall No.I, in person or by a pleader duly instructed and able to answer all material questions relating to the Appeal or who shall be accompanied by some persons able to answers all such questions on the **27.03.2025 at 11.00 AM to answer.**
Take Notice that, in default of your appearance on the day before mentioned the petition will be heard and determined in your absence.
Given under my hand and seal of the Court this **31.01.2025.**
By Order Of The Tribunal, Assistant Registrar Karnataka Appellate Tribunal, Bengaluru
Advocate for Appellant
J.S. DINESH, Advocate,
Mathrushree, 12th 'E' Main Road, 76th Cross, 6th Block, Rajajinagar, Bengaluru-560 010.

ನಗರದಲ್ಲಿ ಕೆರೆ ಭೂಮಿಗಳ ಒತ್ತುವರಿ ಸಂಖ್ಯೆ ಹೆಚ್ಚಳ

ಬೆಂಗಳೂರು: ನಗರದ 837 ಕೆರೆಗಳಲ್ಲಿ 730 ಕೆರೆಗಳನ್ನು ಅನಧಿಕೃತವಾಗಿ ಒತ್ತುವರಿ ಮಾಡಲಾಗಿದ್ದು, ಬೆಂಗಳೂರು ಉತ್ತರ, ದಕ್ಷಿಣ ಮತ್ತು ಪೂರ್ವ ತಾಲೂಕುಗಳ ಭೂಮಾಪಕರ ವರದಿ ಪ್ರಕಾರ 4,554 ಎಕರೆ ಕೆರೆ ಭೂಮಿ ಅತಿಕ್ರಮಣ ಮಾಡಲಾಗಿದೆ ಎಂದು ಜಿಲ್ಲಾಧಿಕಾರಿ ಕಚೇರಿಯ ಅಧಿಕಾರಿಗಳು ತಿಳಿಸಿದರು.

ಬಿಬಿಎಂಪಿ ಮತ್ತು ಕಂದಾಯ ಇಲಾಖೆ ಜಂಟಿಯಾಗಿ ನಿಗಮದ ವ್ಯಾಪ್ತಿಯ ಕೆರೆ ಭೂಮಿ ಮತ್ತು ಅವುಗಳ ಗಡಿಗಳ ಅತಿಕ್ರಮಣಗಳನ್ನು ನಿಭಾಯಿಸಲಿದೆ. 2022ರಲ್ಲಿ ಭಾರೀ ಪ್ರವಾಹದ ನಂತರ, ಹಿಂದಿನ ಸರಕಾರವು ಎಲ್ಲಾ ಜಲಮೂಲಗಳ ಹಾಗೂ ರಾಜಕಾಲುವೆಗಳ ಅತಿಕ್ರಮಣ ಪರಿಶೀಲಿಸಲು ಸಮೀಕ್ಷೆಗೆ ಆದೇಶಿಸಿತ್ತು. ಅತಿಕ್ರಮಣಗಳನ್ನು ತೆಗೆದುಹಾಕಲು ಮತ್ತು ಮಳೆನೀರು ಕಾಲುವೆಗಳಿಂದ ಕೆರೆಗಳಿಗೆ ಮತ್ತು ಕೆರೆಯಿಂದ ಇನ್ನೊಂದು ಕೆರೆಗೆ ಅಡೆ ತಡೆಯಿಲ್ಲದೆ ಮುಕ್ತವಾಗಿ ಹರಿಯುವಂತೆ ಮಾಡಲು ಸಮೀಕ್ಷೆ ನಡೆಸಲಾಯಿತು ಎಂದು ಅಧಿಕಾರಿಗಳು ತಿಳಿಸಿದರು.

ಜಿಲ್ಲಾಧಿಕಾರಿ ಕಚೇರಿಯ ವರದಿಯ ಪ್ರಕಾರ, ಹೆಚ್ಚಿನ ಅತಿಕ್ರಮಣಗಳು ಯಲಹಂಕ ಮತ್ತು ಬೆಂಗಳೂರು ಉತ್ತರ ತಾಲೂಕುಗಳಲ್ಲಿ ಆಗಿವೆ. ಯಲಹಂಕದಲ್ಲಿ 105 ಕೆರೆಗಳಲ್ಲಿ 1,147 ಎಕರೆ ಒತ್ತುವರಿಯಾಗಿದ್ದು, ಬೆಂಗಳೂರು ಉತ್ತರದಲ್ಲಿ 123 ಕೆರೆಗಳಲ್ಲಿ 1,183 ಎಕರೆ ಒತ್ತುವರಿಯಾಗಿದೆ.

ಬೆಂಗಳೂರು ದಕ್ಷಿಣದಲ್ಲಿ 179 ಕೆರೆಗಳಲ್ಲಿ 825 ಎಕರೆ ಒತ್ತುವರಿಯಾಗಿದೆ. ಬಿಬಿಎಂಪಿ ವ್ಯಾಪ್ತಿಯಲ್ಲಿ 187 ಕೆರೆಗಳಿದ್ದು, ಅವುಗಳಲ್ಲಿ 167 ಕೆರೆಗಳನ್ನು ದೂರು ಬಂದ ನಂತರ ಸಮೀಕ್ಷೆ ಮಾಡಲಾಗಿದೆ. ಕಂದಾಯ ಇಲಾಖೆಯ ಭೂಮಾಪಕರ ವರದಿಯ ಆಧಾರದ ಮೇಲೆ, 102 ಕೆರೆಗಳಲ್ಲಿ ಒತ್ತುವರಿ ಗುರುತಿಸಿದ್ದೇವೆ, ಕೇವಲ 29 ಕೆರೆಗಳು ಮಾತ್ರ ಅತಿಕ್ರಮಣದಿಂದ ಮುಕ್ತವಾಗಿವೆ. 29 ಕೆರೆಗಳನ್ನು ಸರಕಾರಿ ಸಂಸ್ಥೆಗಳು ಅತಿಕ್ರಮಣ ಮಾಡಿವೆ ಎಂದು ಬಿಬಿಎಂಪಿ ಅಧಿಕಾರಿಗಳು ತಿಳಿಸಿದರು.

ಕೆಲಸಕ್ಕಿದ್ದ ಮನೆಯಲ್ಲೆ ಚಿನ್ನಾಭರಣ, ನಗದು ದೋಚಿದ್ದ ಮಹಿಳೆ ಸೆರೆ

ಬೆಂಗಳೂರು: ಕೆಲಸಕ್ಕಿದ್ದ ಮನೆಯಿಂದ ಚಿನ್ನಾಭರಣ, ನಗದು ಕಳ್ಳತನ ಮಾಡಿ ಪರಾರಿಯಾಗಿದ್ದ ಅಸ್ಸಾಂ ಮೂಲದ ಮಹಿಳೆ,ಆಕೆಗೆ ನೆರವಾಗಿದ್ದ ಗಂಡ ಮತ್ತು ಗಂಡನ ಅಣ್ಣನನ್ನು ಪರಪ್ಪನ ಅಗ್ರಹಾರ ಠಾಣೆ ಪೊಲೀಸರು ಬಂಧಿಸಿ 273 ಗ್ರಾಂ ಚಿನ್ನಾಭರಣ ಹಾಗೂ ರು. 75,200 ನಗದು ವಶಪಡಿಸಿಕೊಂಡಿದ್ದಾರೆ.

ಠಾಣಾ ಸರಹದ್ದಿನ, ಸಿಂಗಸಂದ್ರದ ಅಪಾರ್ಟ್‌ಮೆಂಟ್‌ವೊಂದರ ಮನೆಯಲ್ಲಿ ಕಳೆದ ಒಂದೂವರೆ ವರ್ಷದಿಂದ ಮನೆಗೆಲಸ ಮಾಡಿಕೊಂಡಿದ್ದ ಅಸ್ಸಾಂ ಮೂಲದ ಮಹಿಳೆ ಕಳೆದ ಜ.27ರಂದು ಮನೆಯ ಕೊಠಡಿಯ ವಾರ್ಡ್‌ರೋಬ್‌ನಲ್ಲಿಟ್ಟಿದ್ದ ಚಿನ್ನಾಭರಣ ಹಾಗೂ ನಗದನ್ನು ಕಳವು ಮಾಡಿಕೊಂಡು ಪರಾರಿಯಾಗಿದ್ದಳು. ಈ ಬಗ್ಗೆ ಮನೆಯ ಮಾಲೀಕರು ಪರಪ್ಪನ ಅಗ್ರಹಾರ ಪೊಲೀಸ್ ಠಾಣೆಗೆ ದೂರು ನೀಡಿದ್ದರು. ಪ್ರಕರಣ ದಾಖಲಿಸಿ ತನಿಖೆ ಕೈಗೊಂಡ ಪೊಲೀಸರಿಗೆ ಸಿಕ್ಕ ಖಚಿತ ಮಾಹಿತಿ ಮೇರೆಗೆ, ಬೆಂಗಳೂರು-ತಿರುಪತಿ ಮುಖ್ಯರಸ್ತೆಯಲ್ಲಿರುವ ಹೊಸಕೋಟೆಯ ಹೋಟೆಲ್‌ವೊಂದರ ಬಳಿ ಮಹಿಳೆ ಸೇರಿದಂತೆ ಇಬ್ಬರು ವ್ಯಕ್ತಿಗಳನ್ನು ವಶಕ್ಕೆ ಪಡೆದುಕೊಳ್ಳಲಾಯಿತು.

ಅಪರಾಧ ಸುದ್ದಿಗಳು

ನಂತರ ವಿಚಾರಣೆಗೊಳಪಡಿಸಿದಾಗ ಚಿನ್ನಾಭರಣ ಮತ್ತು ನಗದನ್ನು ಕಳವು ಮಾಡಿರುವುದು ಗೊತ್ತಾಗಿತ್ತು. ಆರೋಪಿ ಮಹಿಳೆ ತಾನು ಕದ್ದ ವಸ್ತುವನ್ನು ಗಂಡನಿಗೆ ನೀಡಿದ್ದು, ಆತ ಅದನ್ನು ಅವನ ಅಣ್ಣನಿಗೆ ನೀಡಿದ್ದ. ಪ್ರಸ್ತುತ ಆರೋಪಿಗಳ ವಶದಲ್ಲಿದ್ದ 273 ಗ್ರಾಂ ಚಿನ್ನಾಭರಣ ಹಾಗೂ 75,200 ರು. ನಗದು ವಶಪಡಿಸಿ ಕೊಳ್ಳಲಾಗಿದೆ. ಇವುಗಳ ಒಟ್ಟು ಮೌಲ್ಯ ರು. 22,50,00ಗಳಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಈ ಕಾರ್ಯಾಚರಣೆಯನ್ನು ಆಗ್ನೇಯ ವಿಭಾಗದ ಉಪ ಪೊಲೀಸ್ ಆಯುಕ್ತರಾದ ಸಾರಾ ಫಾತಿಮಾರವರ ಮಾರ್ಗದರ್ಶನದಲ್ಲಿ, ಎಲೆಕ್ಟ್ರಾನಿಕ್ ಸಿಟಿ ಉಪ ವಿಭಾಗದ ಸಹಾಯಕ ಪೊಲೀಸ್ ಆಯುಕ್ತ ಸತೀಶ್ ಅವರ ನೇತೃತ್ವದಲ್ಲಿ, ಪರಪ್ಪನ ಅಗ್ರಹಾರ ಪೊಲೀಸ್ ಠಾಣೆಯ ಪೊಲೀಸ್ ಇನ್ಸ್‌ಪೆಕ್ಟರ್ ಸತೀಶ್ ಬಿ.ಎಸ್ ಮತ್ತವರ ತಂಡ ಪ್ರಕರಣ ಪತ್ತೆ ಮಾಡುವಲ್ಲಿ ಯಶಸ್ವಿಯಾಗಿದ್ದಾರೆ.

ಮೊಬೈಲ್ ಫೋನ್ ಕದಿಯುತ್ತಿದ್ದ ಅಪ್ಪ, ಮಗ ಸೆರೆ, 93 ಮೊಬೈಲ್ ವಶ

ಬೆಂಗಳೂರು: ಮೊಬೈಲ್ ಫೋನ್‌ಗಳನ್ನು ಸುಲಿಗೆ ಹಾಗೂ ಮಾರಾಟ ಮಾಡುತ್ತಿದ್ದ ಅಪ್ಪ-ಮಗ ಸೇರಿದಂತೆ ಮೂವರನ್ನು ಮಹದೇವಪುರ ಠಾಣೆ ಪೊಲೀಸರು ಬಂಧಿಸಿ 30.40 ಲಕ್ಷ ರು. ಮೌಲ್ಯದ 93 ಮೊಬೈಲ್‌ಗಳನ್ನು ವಶಪಡಿಸಿಕೊಂಡಿದ್ದಾರೆ.

ಈ ಪ್ರಕರಣದಲ್ಲಿ ಮಗ ಮೊಬೈಲ್ ದರೋಡೆ ಮಾಡಿಕೊಂಡು ಬಂದು ಮಾರಾಟ ಮಾಡಲು ಅಪ್ಪ ಹಾಗೂ ಸ್ನೇಹಿತನಿಗೆ ಕೊಡುತ್ತಿದ್ದುದು ಪೊಲೀಸರ ವಿಚಾರಣೆಯಿಂದ ತಿಳಿದು ಬಂದಿದೆ. ಪಿ.ಜಿ.ಯೊಂದರಲ್ಲಿ ವಾಸವಿರುವ ವ್ಯಕ್ತಿಯೊಬ್ಬರು ಜ.15 ರಂದು ರಾತ್ರಿ ನಾರಾಯಣಪುರ ಹತ್ತಿರ ಹೋಗುತ್ತಿರುವಾಗ ದರೋಡೆಕೋರರ ದ್ವಿ ಚಕ್ರ ವಾಹನದಲ್ಲಿ ಹಿಂಬದಿಯಿಂದ ಬಂದು ಅವರ ಕೈಯಲ್ಲಿದ್ದ ಮೊಬೈಲ್ ಕಿತ್ತು ಕೊಂಡು ಪರಾರಿಯಾಗಿದ್ದ. ಈ ಬಗ್ಗೆ ಅವರು ಪೊಲೀಸರಿಗೆ ದೂರು ನೀಡಿದ್ದರು. ಪ್ರಕರಣದ ತನಿಖೆ ಕೈಗೊಂಡ ಪೊಲೀಸರು ಖಚಿತ ಮಾಹಿತಿಯನ್ನು ಕಲೆಹಾಕಿ, ಮಹದೇವಪುರದ ರೈನ್ಬೋ ಆಸ್ಪತ್ರೆಯ ಬಳಿ ಆರೋಪಿಯನ್ನು ಈ ಪ್ರಕರಣದಲ್ಲಿ ಸುಲಿಗೆಯಾಗಿದ್ದ ಮೊಬೈಲ್ ಫೋನ್ ಹಾಗೂ ಇನ್ನೆರಡು ಮೊಬೈಲ್ ಫೋನ್‌ಗಳು ಮತ್ತು ದ್ವಿಚಕ್ರ ವಾಹನ ಸಮೇತ ವಶಕ್ಕೆ ಪಡೆದು ವಿಚಾರಣೆಗೊಳಪಡಿಸಿದಾಗ ಮೊಬೈಲ್ ಸುಲಿಗೆ ಮಾಡಿರುವುದಾಗಿ ಹೇಳಿದ್ದಾನೆ.

ಅಲ್ಲದೇ ನಗರದ ವಿವಿಧ ಕಡೆಗಳಲ್ಲಿ ಮೊಬೈಲ್ ಫೋನ್‌ಗಳನ್ನು ಸುಲಿಗೆ ಮಾಡಿರುವುದಾಗಿ ತಿಳಿಸಿದ್ದು, ಆರೋಪಿಯನ್ನು ಸುದೀರ್ಘವಾಗಿ ವಿಚಾರಣೆ ನಡೆಸಿ, 21 ಮೊಬೈಲ್ ಫೋನ್‌ಗಳನ್ನು ಆತನು ವಾಸವಿರುವ ಸಾರಾಯಿಪಾಳ್ಯದ ಮನೆಯಿಂದ ವಶಪಡಿಸಿಕೊಳ್ಳಲಾಗಿದೆ. ಸುಲಿಗೆ ಮಾಡಿದ್ದ ಕೆಲವು ಮೊಬೈಲ್ ಫೋನ್‌ಗಳನ್ನು ಮಾರಾಟ ಮಾಡುವ ಸಲುವಾಗಿ ತನ್ನ ಅಪ್ಪ ಹಾಗೂ ಸ್ನೇಹಿತನಿಗೆ ನೀಡಿರುವುದಾಗಿ ತಿಳಿಸಿದ್ದಾನೆ. ಈತನ ಮಾಹಿತಿ ಮೇರೆಗೆ ಥಣಿಸಂದ್ರದ ಮುಖ್ಯರಸ್ತೆಯಲ್ಲಿ 2 ಮೊಬೈಲ್ ಫೋನ್ ಸಮೇತ ಸ್ನೇಹಿತನನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿದಾಗ ಮೊಬೈಲ್ ಫೋನ್‌ಗಳನ್ನು ಮಾರಾಟ ಮಾಡುವ ಸಲುವಾಗಿ ತೆಗೆದುಕೊಂಡಿರುವುದಾಗಿ ತಿಳಿಸಿದ್ದಾನೆ.

ಮೊಬೈಲ್ ಫೋನ್‌ಗಳನ್ನು ಸುಲಿಗೆ ಹಾಗೂ ಮಾರಾಟ ಮಾಡುತ್ತಿದ್ದವರ ಬಂಧನ

ನಂತರ ತನಿಖೆ ಮುಂದುವರೆಸಿ, ಎಲೆಕ್ಟ್ರಾನಿಕ್ ಸಿಟಿ ನೀಲಾದ್ರಿ ರಸ್ತೆಯಲ್ಲಿ 21 ಮೊಬೈಲ್ ಫೋನ್ ಸಮೇತ ಆರೋಪಿಯ ಅಪ್ಪನನ್ನು ವಶಕ್ಕೆ ಪಡೆದು ವಿಚಾರಣೆ ಮಾಡಿ 47 ಮೊಬೈಲ್ ಫೋನ್‌ಗಳನ್ನು ಮಂಗಮನಪಾಳ್ಯ ವಾಸದ ಮನೆಯಿಂದ ವಶಕ್ಕೆ ಪಡೆದಿದ್ದಾರೆ. ಈ ಪ್ರಕರಣದ ಆರೋಪಿಗಳ ವಶದಿಂದ ಒಟ್ಟಾರೆ 93 ಮೊಬೈಲ್ ಫೋನ್‌ಗಳು ಹಾಗೂ ಒಂದು ದ್ವಿ ಚಕ್ರ ವಾಹನ ವಶಪಡಿಸಿಕೊಳ್ಳುವಲ್ಲಿ ಇನ್ಸ್‌ಪೆಕ್ಟರ್ ಪ್ರವೀಣ್ ಬಾಬು ಹಾಗೂ ಸಿಬ್ಬಂದಿ ತಂಡ ಯಶಸ್ವಿಯಾಗಿದೆ.

PUBLIC NOTICE
NATIONAL CONSUMER DISPUTES REDRESSAL COMMISSION
Under the Consumer Protection Act, 2019
Telephone No. :011-24608801-04 | Fax No. :011-24651505
Upbhokta Nyay Bhawan 'F'- Block, General Pool Office Complex, INA, NEW DELHI-110023
Consumer Complaint No. 144 of 2023
Mr. Vidyaramanan S. & Ors. ....Complainants
Versus
LGCL Urban Homes India LLP & Ors. .....Opposite Parties
Opposite Party / Respondent Name:
To:
1. LGCL Urban Homes India LLP And Ors. Through Its Managing Director, Having its Registered Office At: No. 121, Rest House Road, Bangalore-560 001, Karnataka.
2. Dr. Priya Venkatesh D/o Late S.V. Venkatesh, No. 121, Rest House Road, Bangalore-560 001, Bengaluru Urban Karnataka.
3. Sh. Atul Kishen, S/o Late S.V. Venkatesh, No. 121, Rest House Road, Bangalore-560001, Bengaluru Urban Karnataka.
4. LGCL Urban Homes Pvt. Ltd. Through Its Managing Director And Other Directors Registered Office At: No. 121, Rest House Road, Bangalore, Karnataka-560001, Bengaluru Urban Karnataka.
5. Bangalore Development authority Through its Commissioner, Address at: Kumara Park West, T. Chowdaiah Road, Bengalore-560020, Karnataka.
6. ICICI Bank Ltd. Through tis Branch Manager, Having Branch at: No. 47, 5th Main Road, Malleshwaram, Bengalore-560003, Karnataka.

NOTICE
(Service By way of Publication of Notice)
Whereas, a Consumer Complaint No. 144 of 2023 has been filed by the Complainant namely Mr. Vidyaramanan S. S/o Mr. Subramani N, R/o 402, Banjara Abodes, MLA Colony, Telangana, Hyderabad-500034, through their Counsel Mr. Ritesh Khare, Advocate, D-359, Lower Colony, New Delhi-110024, before the Hon'ble National Consumer Disputes Redressal Commission, New Delhi.
2.The Consumer Complaints relates to allegations of deficiency in services coupled with unfair trade practices and negligence acts of the Opposite Parties namely, LGCL Urban Homes India LLP & Ors., having its Regd. Office at: No. 121, Rest House Road, Bangaluru-560001., who undertook to construct and develop a housing project under the name and style of "LGCL New Life" situated at survey Nos. 12, 13/1 and 22 situated at Choodasandra.
3. The above mentioned Opposite parties in the Consumer Complaint, and, it have been brought to the notice of the Hon'ble National Commission by the Complainants that the above mentioned Opposite Parties have been remained "unserved".
4. And whereas, the Hon'ble National Commission vide its order dated 21.08.2024 has, inter alia, posted the case for hearing on **10.02.2025** directing for substituted service of the hearing notice to the Opposite Parties by way of publication in the Newspapers having vide circulation in the locality.
5. Accordingly, take Notice that the above mentioned Opposite Parties to answer the Consumer Compliant and you are hereby directed to attend the hearing in the above Consumer Complaints listed on **10.02.2025 at 10:30 AM.,** in-person or through an authorized representative / counsel, failing which, the case will be heard and determined ex-parte by the Hon'ble National Commission.
Dated on this 20th January, 2025.
By Order
(Rajesh Nath)
Assistant Registrar

60 ಲಕ್ಷ ರು. ಮೌಲ್ಯದ ಡ್ರಗ್ಸ್ ಜಪ್ತಿ

ಬೆಂಗಳೂರು: ಮಾದಕ ವಸ್ತುಗಳ ಮಾರಾಟದಲ್ಲಿ ತೊಡಗಿದ್ದ ಇಬ್ಬರು ವಿದೇಶಿ ಪ್ರಜೆಗಳು ಸೇರಿ ಮೂವರನ್ನು ಬಂಧಿಸಿರುವ ಸಿಸಿಬಿ ಪೊಲೀಸರು ಅವರಿಂದ 60 ಲಕ್ಷ ರು. ಮೌಲ್ಯದ ಡ್ರಗ್ಸ್ ಜಪ್ತಿ ಮಾಡಿದ್ದಾರೆ.

ಬಂಧಿತ ಆರೋಪಿಗಳಿಂದ ಹೆರಾಯಿನ್ 78.22 ಗ್ರಾಂ, ರೆಕ್ಸೋಕಾರ್ಡ್ ಕೆಮ್ಮು ಸಿರಪ್ 110 ಬಾಟಲಿಗಳು, ಟ್ರಮಾಡೋಲ್ ಮಾತ್ರೆಗಳು 15 ಶೀಟ್‌ಗಳ 150 ಮಾತ್ರೆಗಳು, ಆಲ್ಪೋಝೋಲ್ ಮಾತ್ರೆಗಳು 12 ಶೀಟ್‌ಗಳು, 12 ಶೀಟ್‌ಗಳು ಸೇರಿ 60 ಲಕ್ಷ ಮೌಲ್ಯದ ಮಾದಕವಸ್ತುಗಳನ್ನು ವಶಕ್ಕೆ ಪಡೆದುಕೊಂಡು ಹೆಚ್ಚಿನ ತನಿಖೆಯನ್ನು ಕೈಗೊಳ್ಳಲಾಗಿದೆ ಎಂದು ನಗರ ಪೊಲೀಸ್ ಆಯುಕ್ತ ದಯಾನಂದ ಅವರು ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

ಆರ್.ಟಿ.ನಗರ ಬಳಿ ಹೆರಾಯಿನ್ ಮಾರಾಟ ಮಾಡುತ್ತಿದ್ದ ಖಚಿತವಾದ ಮಾಹಿತಿ ಆಧರಿಸಿ ಕಾರ್ಯಾಚರಣೆ ಕೈಗೊಂಡು ಓರ್ವನನ್ನು ಬಂಧಿಸಿ ವಿಚಾರಣೆ ನಡೆಸಿದಾಗ ಆತ ನಾಗಾಲ್ಯಾಂಡ್‌ನಲ್ಲಿರುವ ಓರ್ವ ಸ್ನೇಹಿತನಿಂದ ನಿಷೇಧಿತ ಮಾದಕ ವಸ್ತು ಹೆರಾಯಿನ್ ಅನ್ನು ಕಡಿಮೆ ಬೆಲೆಗೆ ಖರೀದಿಸಿಕೊಂಡು ಬಂದು ಬೆಂಗಳೂರಿನಲ್ಲಿ ಪರಿಚಯಸ್ಥ ಗಿರಾಕಿಗಳಿಗೆ ಹೆಚ್ಚಿನ ಬೆಲೆಗೆ ಮಾರಾಟ ಮಾಡಿ ಅಕ್ರಮ ಹಣದ ಸಂಪಾದನೆಯಲ್ಲಿ ತೊಡಗಿರುವುದನ್ನು ಬಾಯ್ಬಿಟ್ಟಿದ್ದಾನೆ ಎಂದರು.

ಆತನಿಂದ 78.22 ಗ್ರಾಂ ಹೆರಾಯಿನ್, ಕೃತ್ಯಕ್ಕೆ ಬಳಸಲಾಗುತ್ತಿದ್ದ ಎರಡು ಮೊಬೈಲ್‌ಫೋನ್ ಹಾಗೂ ಒಂದು ಎಲೆಕ್ಟ್ರಾನಿಕ್ ತೂಕದ ಯಂತ್ರ ವಶಪಡಿಸಿಕೊಳ್ಳಲಾಗಿದೆ. ಮಾಹಿತಿಯಲ್ಲಿ ವಿದೇಶಿ ಮೂಲದ ಇಬ್ಬರು ವ್ಯಕ್ತಿಗಳು ವೀಸಾ ಅವಧಿ ಮುಕ್ತಾಯವಾಗಿದ್ದರೂ ಸಹ ಅನಧಿಕೃತವಾಗಿ ವಾಸವಾಗಿರುವುದಾಗಿ ತಿಳಿಸಿರುತ್ತಾರೆ. ಅಮೃತಹಳ್ಳಿ ಪೊಲೀಸ್ ಠಾಣೆ ಮತ್ತು ಕೊಡಿಗೇಹಳ್ಳಿ ಪೊಲೀಸ್ ಠಾಣೆಯ ವ್ಯಾಪ್ತಿಯಲ್ಲಿ ಅನಧಿಕೃತವಾಗಿ ವಾಸವಾಗಿದ್ದ ಇಬ್ಬರು ವ್ಯಕ್ತಿಗಳನ್ನು ವಶಕ್ಕೆ ಪಡೆದು ವಿಚಾರಣೆ ಮಾಡಿದಾಗ, ವೀಸಾ ಅವಧಿ ಮುಗಿದಿದ್ದರೂ ಸಹ ಭಾರತದಲ್ಲಿಯೇ ಇರುವುದಾಗಿ ತಿಳಿಸಿರುತ್ತಾರೆ. ಈ ಕುರಿತು ವಿದೇಶಿ ಪ್ರಜೆಗಳನ್ನು ಎಫ್‌ಆರ್‌ಆರ್‌ಓ ರವರ ಮುಂದೆ ಹಾಜರುಪಡಿಸಿ, ಮುಂದಿನ ಕ್ರಮಕ್ಕಾಗಿ ಸೊಂಡೆಕೊಪ್ಪದಲ್ಲಿರುವ ಫಾರಿನರ್ ರಿಸ್ಟ್ರಿಕ್ಷನ್ ಸೆಂಟರ್ (ಎಫ್‌ಆರ್‌ಸಿ)ನಲ್ಲಿ ಇರಿಸಲಾಗಿದೆ ಎಂದು ಹೇಳಿದರು.

ಬಾಂಗ್ಲಾ ಮಹಿಳೆಯ ಅತ್ಯಾಚಾರ, ಕೊಲೆ ಪ್ರಕರಣ: ಆರೋಪಿ ಸೆರೆ

ಬೆಂಗಳೂರು: ಬಾಂಗ್ಲಾದೇಶ ಮೂಲದ ಮಹಿಳೆ ಮೇಲೆ ಅತ್ಯಾಚಾರವೆಸಗಿ ಹತ್ಯೆಗೈದ ಪ್ರಕರಣದ ಆರೋಪಿಯನ್ನು ರಾಮಮೂರ್ತಿ ನಗರ ಠಾಣೆ ಪೊಲೀಸರು ಬಂಧಿಸಿದ್ದಾರೆ.

ಬಾಗಲಕೋಟೆ ಮೂಲದ ಮುದುಕಪ್ಪ (28) ಎಂಬಾತನನ್ನು ಫೆ.2ರಂದು ಬಂಧಿಸಲಾಗಿದ್ದು, ಹೆಚ್ಚಿನ ವಿಚಾರಣೆಗೊಳಪಡಿಸಲಾಗಿದೆ ಎಂದು ಬೆಂಗಳೂರು ನಗರ ಪೊಲೀಸ್ ಆಯುಕ್ತ ಬಿ. ದಯಾನಂದ್ ತಿಳಿಸಿದ್ದಾರೆ.

ಜನವರಿ 24ರಂದು ರಾಮಮೂರ್ತಿ ನಗರ ಠಾಣಾ ವ್ಯಾಪ್ತಿಯ ಕಲ್ಕೆರೆ ಕೆರೆ ಬಳಿಯ ನಿರ್ಜನ ಪ್ರದೇಶದಲ್ಲಿ ಅತ್ಯಾಚಾರವೆಸಗಿ ಬಳಿಕ ಕಲ್ಲು ಎತ್ತಿಹಾಕಿ ಕೊಲೆ ಮಾಡಿದ ಸ್ಥಿತಿಯಲ್ಲಿ 28 ವರ್ಷದ ಮಹಿಳೆಯ ಶವ ಪತ್ತೆಯಾಗಿತ್ತು.

ಬೆಂಗಳೂರಲ್ಲಿ ವಾಟರ್ ಟ್ಯಾಂಕರ್ ಚಾಲಕನಾಗಿ ಕೆಲಸ ಮಾಡಿಕೊಂಡಿದ್ದ ಮುದುಕಪ್ಪ, ಮಹಿಳೆ ವಾಸವಿದ್ದ ಶೆಡ್ ಹಾಗೂ ಆಕೆ ಕೆಲಸ ಮಾಡುತ್ತಿದ್ದ ಅಪಾರ್ಟ್‌ಮೆಂಟ್‌ಗೆ ನೀರು ಪೂರೈಸಲು ಹೋದಾಗ ಆಕೆಯೊಂದಿಗೆ ಮಾತನಾಡುತ್ತಿದ್ದ.

ಜನವರಿ 23ರಂದು ಕೆಲಸ ಮುಗಿಸಿ ಮನೆಗೆ ಹೋಗುತ್ತಿದ್ದ ಮಹಿಳೆಯನ್ನು ಹಿಂಬಾಲಿಸಿದ್ದ ಮುದುಕಪ್ಪ, ಬಳಿಕ ಆಕೆಯನ್ನು ಕಲ್ಕೆರೆ ಸಮೀಪದ ನಿರ್ಜನ ಪ್ರದೇಶಕ್ಕೆ ಕರೆದೊಯ್ದು ಲೈಂಗಿಕ ಕ್ರಿಯೆಗೆ ಒತ್ತಾಯಿಸಿದ್ದ. ಆಕೆ ಪ್ರತಿರೋಧ ಒಡ್ಡಿದಾಗ ಲೈಂಗಿಕ ದೌರ್ಜನ್ಯ ಎಸಗಿ, ನಂತರ ಉಸಿರುಗಟ್ಟಿಸಿ ಹತ್ಯೆಗೈದು ತಲೆ ಮೇಲೆ ಕಲ್ಲು ಎತ್ತಿ ಹಾಕಿ ಪರಾರಿಯಾಗಿದ್ದ ಎಂದು ಪೊಲೀಸರು ತಿಳಿಸಿದ್ದಾರೆ.

ಮರಣೋತ್ತರ ವರದಿ ಆಧರಿಸಿ ಆರೋಪಿ ಬಂಧನ: ಈ ಕುರಿತು ಪ್ರಕರಣ ದಾಖಲಿಸಿಕೊಂಡಿದ್ದ ರಾಮಮೂರ್ತಿ ನಗರ ಠಾಣೆ ಪೊಲೀಸರು ಘಟನೆಯ ದಿನ ಕೆರೆಯ ಬಳಿ ಓಡಾಡಿದ್ದ ಐದಾರು ಜನರನ್ನು ವಿಚಾರಣೆಗೆ ಒಳಪಡಿಸಿದ್ದರು. ಬಳಿಕ ಮೃತದೇಹದ ಮರಣೋತ್ತರ ಪರೀಕ್ಷಾ ವರದಿ ಹಾಗೂ ಎಫ್‌ಎಸ್‌ಎಲ್ ವರದಿ ಆಧರಿಸಿ ಆರೋಪಿ ಮುದುಕಪ್ಪನನ್ನು ಬಂಧಿಸಿದ್ದಾರೆ.



ರಾಜರಾಜೇಶ್ವರಿನಗರದ ಪ್ರತಿಷ್ಠಿತ ಐಡಿಯಲ್ ಹೋಮ್ಸ್ ಕೋ-ಆಪರೇಟಿವ್ ಹೌಸಿಂಗ್ ಸೊಸೈಟಿಯ ನೂತನ ನಿರ್ದೇಶಕರಾಗಿ ಅವಿರೋಧವಾಗಿ ಆಯ್ಕೆಯಾದ ಕೃಷ್ಣಂ ರಾಜ್ ಅವರಿಗೆ ಯಶವಂತಪುರ ವಿಧಾನಸಭಾ ಕ್ಷೇತ್ರದ ಕಾಂಗ್ರೆಸ್ ಮುಖಂಡರು ಅಭಿನಂದನೆ ಸಲ್ಲಿಸಿದರು.

ಕೊಲೆ ಆರೋಪಿ ಕಾಲಿಗೆ ಗುಂಡೇಟು

ಬೆಂಗಳೂರು: ಕೊಲೆ, ಸುಲಿಗೆ, ಬೆದರಿಕೆ ಸೇರಿ ಗಂಭೀರ ಅಪರಾಧ ಪ್ರಕರಣಗಳಲ್ಲಿ ಭಾಗಿಯಾಗಿದ್ದ ಕುಖ್ಯಾತ ರೌಡಿ ಶ್ರೀನಿವಾಸ್ ಅಲಿಯಾಸ್ ಗುಬ್ಬಚ್ಚಿ ಸೀನನಿಗೆ ಮುಂಜಾನೆ ಸರ್ಜಾಪುರ ಪೊಲೀಸರು ಗುಂಡು ಹೊಡೆದು ಬಂಧಿಸಿದ್ದಾರೆ. ಕಾಲಿಗೆ ಗುಂಡೇಟು ತಗುಲಿ ಗಾಯಗೊಂಡಿರುವ ರೌಡಿ ಶ್ರೀನಿವಾಸ್ ಅಲಿಯಾಸ್ ಗುಬ್ಬಚ್ಚಿ ಸೀನ ಸ್ಥಳೀಯ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದು, ಪ್ರಾಣಾಪಾಯದಿಂದ ಪಾರಾಗಿದ್ದಾನೆ. ಆರೋಪಿಯಾದ ಸೀನ ಬಂಧಿಸಲು ಬಂದ ಹಲ್ಲೆ ನಡೆಸಿದ ಪೊಲೀಸರಿಗೆ ಚಿಕಿತ್ಸೆಗೆ ರವಾನಿಸಲಾಗಿದೆ. ಕಳೆದ ಜ. 28ರಂದು ದೊಮ್ಮಸಂದ್ರ, ಸಂತೆ ಮೈದಾನದಲ್ಲಿ ನಡೆದಿದ್ದ ಮಾಜಿ ರೌಡಿ ಶೀಟರ್ ಮುಸರಿ ವೆಂಕಟೇಶನ ಕೊಲೆ ಪ್ರಕರಣದಲ್ಲಿ ಗುಬ್ಬಚ್ಚಿ ಸೀನ ಹಾಗೂ ಆತನ ಸಹಚರರು ಭಾಗಿಯಾಗಿದ್ದರು. ಪೊಲೀಸರು ಪ್ರಕರಣ ದಾಖಲಿಸಿ ಬಂಧನಕ್ಕೆ ಶೋಧ ನಡೆಸುತ್ತಿದ್ದಾಗ ತಲೆಮರೆಸಿಕೊಂಡಿದ್ದ ಗುಬ್ಬಚ್ಚಿ ಸೀನ ಮುಂಜಾನೆ ಸರ್ಜಾಪುರದ ದೊಮ್ಮಸಂದ್ರದ ಬಳಿಯಿರುವ ಬೇಕರಿಯಿಂದ ತೆರಳುತ್ತಿದ್ದ ಬಗ್ಗೆ ಮಾಹಿತಿ ಪಡೆದ ಪೊಲೀಸರು ಮೇಲೆ ದಾಳಿ ನಡೆಸಿದ್ದಾರೆ. ಈ ವೇಳೆ ಇನ್ಸ್‌ಪೆಕ್ಟರ್ ನವೀನ್ ಕುಮಾರ್ ಹಾಗೂ ಪೊಲೀಸ್ ಕಾನ್ಸ್‌ಟೇಬಲ್ ಇರ್ಫಾನ್ ಕಲಾರಿ ಮೇಲೆ ಹಲ್ಲೆಗೈಯಲು ಯತ್ನಿಸಿದ್ದಾನೆ. ಇರ್ಫಾನ್ ಕಲಾರಿ ಕೈಗೆ ಚಾಕುವಿನಿಂದ ಇರಿದಿದ್ದಾನೆ. ಕೂಡಲೇ ನವೀನ್ ಎಚ್ಚರಿಕೆ ನೀಡಿ ಶರಣಾಗುವಂತೆ ಗಾಳಿಯಲ್ಲಿ ಗುಂಡು ಹಾರಿಸಿ ಮನವಿ ಮಾಡಿಕೊಂಡಿದ್ದಾರೆ. ಆ ಬಳಿಕ ಇರ್ಫಾನ್ ಪೊಲೀಸರ ಮೇಲೆ ಹಲ್ಲೆ ನಡೆಸಿ ಪರಾರಿ ಆಗಲು ಯತ್ನಿಸಿದ ವೇಳೆ ಆತ್ಮರಕ್ಷಣೆಗಾಗಿ ಆರೋಪಿ ಕಾಲಿಗೆ ಇನ್ಸ್‌ಪೆಕ್ಟರ್ ಗುಂಡು ಹೊಡೆದಿದ್ದರು.

ಸಮಾಚಾರ ಸಣ್ಣದಲ್ಲ

ಉತ್ಥಾನ ಪ್ರಬಂಧ ಸ್ಪರ್ಧೆ ಫಲಿತಾಂಶ ಪ್ರಕಟ

ಬೆಂಗಳೂರು: ಉತ್ಥಾನ ಮಾಸಪತ್ರಿಕೆಯು ಕಾಲೇಜು ವಿದ್ಯಾರ್ಥಿಗಳಿಗಾಗಿ ಆಯೋಜಿಸಿದ ರಾಜ್ಯಮಟ್ಟದ ವಾರ್ಷಿಕ ಪ್ರಬಂಧ ಸ್ಪರ್ಧೆಯಲ್ಲಿ ನೆಲಮಂಗಲದ ಪರಿಪೂರ್ಣ ಸನಾತನ ಆಯುರ್ವೇದ ಮೆಡಿಕಲ್ ಕಾಲೇಜಿನ ಭೂಮಿಕಾ ನಾಯ್ಕ ಪ್ರಥಮ ಬಹುಮಾನ ಪಡೆದಿದ್ದಾರೆ. ಕೃತಕ ಬುದ್ಧಿಮತ್ತೆ ಮತ್ತು ಭವಿಷ್ಯದ ಜಗತ್ತು – ಎಂಬ ವಿಷಯದ ಕುರಿತು ನಡೆದ ಈ ಪ್ರಬಂಧ ಸ್ಪರ್ಧೆಯಲ್ಲಿ ರಾಜ್ಯದೆಲ್ಲೆಡೆಯ 322ಕ್ಕೂ ಅಧಿಕ ಕಾಲೇಜುಗಳ 632 ವಿದ್ಯಾರ್ಥಿಗಳು ಪ್ರಬಂಧ ಬರೆದಿದ್ದು, ಪತ್ರಕರ್ತ ಚೈತನ್ಯ ಹೆಗಡೆ ಸ್ಪರ್ಧೆಯ ತೀರ್ಪುಗಾರರಾಗಿ ವಿಜೇತ ಪ್ರಬಂಧಗಳನ್ನು ಆಯ್ಕೆ ಮಾಡಿದರು.

ವಿಜೇತ ವಿದ್ಯಾರ್ಥಿಗಳ ವಿವರ: ನೆಲಮಂಗಲದ ಶ್ರೀ ಪರಿಪೂರ್ಣ ಸನಾತನ ಆಯುರ್ವೇದ ಮೆಡಿಕಲ್ ಕಾಲೇಜಿನ ಬಿಎಎಂಎಸ್ ವಿದ್ಯಾರ್ಥಿನಿ ಭೂಮಿಕಾ ನಾಯ್ಕ ಪ್ರಥಮ ಬಹುಮಾನ (10,000 ರು.), ಉ.ಕ.ದ ಕುಮಟಾದ ಕಮಲಾ ಬಾಳಿಗಾ ಶಿಕ್ಷಣ ಮಹಾವಿದ್ಯಾಲಯದ ಬಿ.ಇಡಿ. ವಿದ್ಯಾರ್ಥಿನಿ ವೈಶಾಲಿ ಉಮೇಶ್ ಗೊಂಡ ಎರಡನೆಯ ಬಹುಮಾನ (7,000 ರು.) ಹಾಗೂ ಪುತ್ತೂರಿನ ವಿವೇಕಾನಂದ ಮಹಾವಿದ್ಯಾಲಯದ ಎಂ.ಎ.ಪತ್ರಿಕೋದ್ಯಮ ವಿದ್ಯಾರ್ಥಿನಿ ಸುಲಕ್ಷಣಾ ಶರ್ಮಾ ಮೂರನೆಯ ಬಹುಮಾನ (5,000 ರು.) ಪಡೆದಿದ್ದಾರೆ. ಹತ್ತು ಮಂದಿ ವಿದ್ಯಾರ್ಥಿಗಳು ಮೆಚ್ಚುಗೆಯ ಬಹುಮಾನಗಳಿಗೆ (ತಲಾ ರೂ. 2,000) ಪಾತ್ರರಾಗಿದ್ದಾರೆ. ಸುರತ್ಕಲ್ ರಾಷ್ಟ್ರೀಯ ತಂತ್ರಜ್ಞಾನ ಸಂಸ್ಥೆ (ಎನ್ಐಟಿ)ಯ ಬಿ.ಟೆಕ್. ವಿದ್ಯಾರ್ಥಿ ಗುರುಪ್ರಸಾದ್ ಭಟ್ ಎಚ್. ಮೈಸೂರಿನ ಪ್ರಥಮದರ್ಜೆ ಕಾಲೇಜಿನ ಎಂ.ಕಾಂ. ವಿದ್ಯಾರ್ಥಿನಿ ಸಹನಾ ಬಿ.. ಮಂಗಳೂರಿನ ಗೋವಿಂದದಾಸ ಕಾಲೇಜಿನ ಬಿ.ಬಿ.ಎ. ವಿದ್ಯಾರ್ಥಿನಿ ಶ್ರದ್ಧಾ ಎಸ್. ರಾವ್, ಕುಮಟಾದ ಕಮಲಾ ಬಾಳಿಗಾ ಶಿಕ್ಷಣ ಮಹಾವಿದ್ಯಾಲಯದ ಬಿ.ಇಡಿ. ವಿದ್ಯಾರ್ಥಿನಿ ದೀಪಾ ಕೇಶವ ಬಡಗಿ, ಹುಬ್ಬಳ್ಳಿಯ ಕೆ.ಎಸ್.ಎಸ್. ವಿಜಯನಗರ ಕಾಲೇಜ್ ಆಫ್ ಎಜುಕೇಷನ್‌ನ ಐಶ್ವರ್ಯ ಕೆ., ಕೋಲಾರದ ಮೇಮಗಲ್‌ನ ಸರಕಾರಿ ಪ್ರಥಮದರ್ಜೆ ಕಾಲೇಜಿನ ಬಿ.ಕಾಂ. ವಿದ್ಯಾರ್ಥಿನಿ ಅನನ್ಯ ವಿ. ಮೈಸೂರಿನ ನರಸೀಪುರದ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಬಿ.ಎ. ವಿದ್ಯಾರ್ಥಿ ರಾಜಶೇಖರ ಎಚ್.ಎನ್., ಮೂಡಬಿದಿರೆಯ ಶ್ರೀಧವಲಾ ಕಾಲೇಜಿನ ಬಿ.ಎ. ವಿದ್ಯಾರ್ಥಿನಿ ರಕ್ಷಿತಾ, ಕಾಸರಗೋಡಿನ ಸೆಂಟ್ರಲ್ ಯುನಿವರ್ಸಿಟಿ ಆಫ್ ಕೇರಳದ ಎಂ.ಎ. ವಿದ್ಯಾರ್ಥಿನಿ ಜ್ಯೋತಿರ್ಲಕ್ಷ್ಮಿ, ಶಿಕಾರಿಪುರದ ಕದಂಬ ಪ್ರಥಮದರ್ಜೆ ಕಾಲೇಜು, ಶಿರಾಳಕೊಪ್ಪದ ಎಂ.ಎ. ವಿದ್ಯಾರ್ಥಿ ರೋಹನ್ ಕುಮಾರ್ ಸಿ. ಮೆಚ್ಚುಗೆಯ ಬಹುಮಾನಗಳಿಗೆ ಪಾತ್ರರಾಗಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

ವಿರಾಮ
ಪ್ರತಿ ಭಾನುವಾರ

ಜಾಗತಿಕ ಹೂಡಿಕೆದಾರರ ಸಮಾವೇಶಕ್ಕೆ ಸಿದ್ಧತೆ | 5–6 ವಿದೇಶಿ ವಿವಿ ಜತೆ ಒಡಂಬಡಿಕೆ, ಪ್ರತಿಷ್ಠಿತ ವಿವಿ ಗಳು, ಪ್ರತಿಷ್ಠಾನಗಳು ಭಾಗಿ: ಎಂ.ಬಿ.ಪಾಟೀಲ

ಕ್ವಿನ್‌ಸಿಟಿ: ಫೆ.13ಕ್ಕೆ ರೌಂಡ್ ಟೇಬಲ್ ಚರ್ಚೆ

ಬೆಂಗಳೂರು: ಈ ಬಾರಿಯ ಜಾಗತಿಕ ಹೂಡಿಕೆದಾರರ ಸಮಾವೇಶದಲ್ಲಿ ದೇಶ– ವಿದೇಶಗಳ ಪ್ರತಿಷ್ಠಿತ ವಿಶ್ವವಿದ್ಯಾಲಯಗಳು ಮತ್ತು ಹೆಸರಾಂತ ಉದ್ಯಮಗಳ ಪ್ರತಿಷ್ಠಾನಗಳೊಂದಿಗೆ ಉದ್ದೇಶಿತ 'ಕ್ವಿನ್ ಸಿಟಿ'ಯಲ್ಲಿ ಅತ್ಯುತ್ಕೃಷ್ಟ ಶಿಕ್ಷಣ, ಸಂಶೋಧನೆ ಮತ್ತು ನಾವೀನ್ಯತೆಗಳ ಕ್ಷೇತ್ರದಲ್ಲಿ ಸಹಭಾಗಿತ್ವದ ಮೂಲಕ ದಕ್ಷ ಕಾರ್ಯ ಪರಿಸರ ಸೃಷ್ಟಿಸುವ ಕುರಿತು ಪ್ರತ್ಯೇಕ ದುಂಡುಮೇಜಿನ ಗೋಷ್ಠಿ ಏರ್ಪಡಿಸಲಾಗಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ ತಿಳಿಸಿದ್ದಾರೆ.

ವಿವಿಗಳ ಜತೆ ಒಡಂಬಡಿಕೆ: ಈ ಬಗ್ಗೆ ಮಾಹಿತಿ ನೀಡಿದ ಎಂ.ಬಿ.ಪಾಟೀಲ್, ಸಮಾವೇಶದ ಎರಡನೆಯ ದಿನವಾದ ಫೆ.13ರಂದು ಈ ಗೋಷ್ಠಿ ನಡೆಯಲಿದೆ. ಈ ಸಂದರ್ಭದಲ್ಲಿ ವಿದೇಶಗಳ 5–6 ಮತ್ತು ಭಾರತದ 7–8 ವಿಶ್ವವಿದ್ಯಾಲಯಗಳೊಂದಿಗೆ ಒಡಂಬಡಿಕೆಗೆ ಸಹಿಹಾಕುವ ಸಾಧ್ಯತೆ ಕೂಡ ಇದೆ. ಈ ಸಂಬಂಧ ಮಾತುಕತೆ ಪ್ರಗತಿಯಲ್ಲಿದ್ದು, ಯಾವ ವಿವಿಗಳೊಂದಿಗೆ ಒಡಂಬಡಿಕೆ ಆಗಲಿದೆ ಎನ್ನುವುದನ್ನು ನಂತರದ ದಿನಗಳಲ್ಲಿ ಅಂತಿಮವಾಗಲಿದೆ. ಯುಜಿಸಿ ನಿಯಮಗಳ ಪ್ರಕಾರ, ಜಗತ್ತಿನ ಮೊದಲ 500 ಸ್ಥಾನಗಳಲ್ಲಿರುವ ವಿ.ವಿ.ಗಳು ಭಾರತದಲ್ಲಿ ತಮ್ಮ ಕ್ಯಾಂಪಸ್ ತೆರೆಯಲು ಅವಕಾಶವಿದ್ದು, ಇದನ್ನು ಸದ್ಬಳಕೆ ಮಾಡಿಕೊಳ್ಳಲಾಗುವುದು ಎಂದಿದ್ದಾರೆ.



ಬೃಹತ್ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ ಮಂಗಳವಾರ ದೆಹಲಿಯಲ್ಲಿ ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಅವರನ್ನು ಭೇಟಿಯಾಗಿ ಫೆ.11ರಿಂದ 14ರವರೆಗೆ ಬೆಂಗಳೂರಿನಲ್ಲಿ ನಡೆಯುವ ಜಾಗತಿಕ ಬಂಡವಾಳ ಹೂಡಿಕೆದಾರರ ಸಮಾವೇಶದಲ್ಲಿ ಭಾಗವಹಿಸಲು ಅಧಿಕೃತ ಆಹ್ವಾನ ನೀಡಿದರು. ಕೈಗಾರಿಕಾ ಇಲಾಖೆ ಆಯುಕ್ತೆ ಗುಂಜನ್ ಕೃಷ್ಣ, ಇತರ ಅಧಿಕಾರಿಗಳು ಇದ್ದರು. (ಚಿತ್ರ:1) ಕ್ವಿನ್‌ಸಿಟಿಯ ಪರಿಕಲ್ಪನೆ. (ಚಿತ್ರ:2)

ಪೂರಕ ವಲಯಗಳಿಗೂ ಆದ್ಯತೆ: ಜಾಗತಿಕ ಹೂಡಿಕೆದಾರರ ಸಮಾವೇಶದಲ್ಲಿ ಕೈಗಾರಿಕೋದ್ಯಮಗಳಲ್ಲಿನ ಹೂಡಿಕೆ ಬಗ್ಗೆ ಮಾತ್ರ ಗಮನವಿರುವುದಿಲ್ಲ. ಕೌಶಲ್ಯಪೂರ್ಣ ಮಾನವ ಸಂಪನ್ಮೂಲ ಸೃಷ್ಟಿಯೂ ಸೇರಿದಂತೆ ಸಂಶೋಧನೆ ಮತ್ತು ಅದಕ್ಕೆ ಪೂರಕವಾಗಿರುವ ವಲಯಗಳಿಗೂ ಆದ್ಯತೆ ಇರಲಿದೆ. ಏಕೆಂದರೆ, ಕ್ವಿನ್ ಸಿಟಿ ಯೋಜನೆಯು ಭವಿಷ್ಯದ ನಗರಾಭಿವೃದ್ಧಿಯ ಪರಿಕಲ್ಪನೆ ಮತ್ತು ಜಾಗತಿಕ ಗುಣಮಟ್ಟದ ಉದ್ಯಮಶೀಲತೆ, ಕೌಶಲ ಮುಂತಾದವನ್ನು ಒಳಗೊಂಡಿದೆ ಎಂದು ಸಚಿವ ಪಾಟೀಲ್ ಹೇಳಿದ್ದಾರೆ.

ಗಣ್ಯಾತಿಗಣ್ಯರು ಭಾಗಿ: ಒಂದೂವರೆ ಗಂಟೆ ನಡೆಯುವ ಈ ಗೋಷ್ಠಿಯಲ್ಲಿ ರಾಜ್ಯದ ಉನ್ನತ ಶಿಕ್ಷಣ ಸಚಿವ ಡಾ.ಎಂ ಸಿ ಸುಧಾಕರ್, ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ ಪಾಟೀಲ ಹಾಗೂ ಹಿರಿಯ ಅಧಿಕಾರಿಗಳು ಭಾಗವಹಿಸಲಿದ್ದಾರೆ. ಅಲ್ಲದೆ, ಅಜೀಂ ಪ್ರೇಂಜಿ, ಪಿಇಎಸ್, ಎಂ.ಎಸ್.ರಾಮಯ್ಯ ಅನ್ವಯಿಕ ವಿಜ್ಞಾನಗಳ ವಿವಿ, ದಯಾನಂದ ಸಾಗರ್, ಚಾಣಕ್ಯ, ಸೆಂಟ್ ಜೋಸೆಫ್, ಮಣಿಪಾಲ್ ಅಕಾಡೆಮಿ ಆಫ್ ಹೈಯರ್ ಎಜುಕೇಷನ್, ಅಮಿಟಿ, ಬಿಎಲ್ ಡಿಇ, ಕ್ರೈಸ್ಟ್, ಜೈನ್, ಕೆಎಲ್‌ಇ ಸೇರಿದಂತೆ ಇನ್ನೂ ಅನೇಕ ಪ್ರತಿಷ್ಠಿತ ವಿಶ್ವವಿದ್ಯಾಲಯಗಳಿಗೆ ಆಹ್ವಾನ ನೀಡಲಾಗಿದೆ. ಜತೆಗೆ ಐಐಎಸ್ಸಿ, ಜವಾಹರ ಲಾಲ್ ನೆಹರು ಉನ್ನತ ವಿಜ್ಞಾನ ಸಂಶೋಧನಾ ಕೇಂದ್ರ, ನಿಮ್ಹಾನ್ಸ್, ನ್ಯಾಷನಲ್ ಲಾ ಸ್ಕೂಲ್ ಆಫ್ ಇಂಡಿಯಾ, ನ್ಯೂಯಾರ್ಕಿನ ಸೆಂಟ್ ಜಾನ್ ಯೂನಿವರ್ಸಿಟಿ, ಇಂಗ್ಲೆಂಡಿನ ಯೂನಿವರ್ಸಿಟಿ ಆಫ್ ಯಾರ್ಕ್, ವೆಲ್ಲೂರಿನ ವಿಐಟಿ ಮತ್ತು ಕ್ರಿಶ್ಚಿಯನ್ ಮೆಡಿಕಲ್ ಕಾಲೇಜು, ಪಿಲಾನಿಯ ಬಿರ್ಲಾ ತಂತ್ರಜ್ಞಾನ ಮತ್ತು ವಿಜ್ಞಾನ ಸಂಸ್ಥೆ (ಬಿಟ್ಸ್), ಶಾಸ್ತ್ರ ಯೂನಿವರ್ಸಿಟಿ ಮತ್ತು ಲವ್ಲಿ ಪ್ರೊಫೆಷನಲ್ ಯೂನಿವರ್ಸಿಟಿಗಳ ಪರಿಣತರೂ ಭಾಗವಹಿಸಲು ವಿಶ್ವಾಸವಿದೆ ಎಂದಿದ್ದಾರೆ. ಅಜೀಂ ಪ್ರೇಂಜಿ, ಇನ್ಫೋಸಿಸ್, ರಿಲಯನ್ಸ್, ಅದಾನಿ, ಭಾರತಿ, ವಿಪ್ರೊ, ಬಯೋಕಾನ್, ಕೋಟಕ್ ಎಜುಕೇಶನ್, ಶಿವ ನಾಡಾರ್, ಬಜಾಜ್ ಮತ್ತು ಮಹೀಂದ್ರ ಪ್ರತಿಷ್ಠಾನ, ಟಾಟಾ ಟ್ರಸ್ಟ್, ಎಚ್‌ಡಿಎಫ್‌ಸಿ, ಬ್ಯಾಂಕ್ ಪರಿವರ್ತನ್, ಆದಿತ್ಯ ಬಿರ್ಲಾ ಗ್ರೂಪ್, ಸಿಎಸ್‌ಆರ್ ಹಾಗೂ ಏಷ್ಯನ್ ಪೇಂಟ್ಸ್ ಸಿಎಸ್‌ಆರ್ ಸಂಸ್ಥೆಗಳ ಉನ್ನತ ಮಟ್ಟದ ಪ್ರತಿನಿಧಿಗಳು ಕೂಡ ಇದರಲ್ಲಿ ತಮ್ಮ ವಿಚಾರಗಳನ್ನು ಮಂಡಿಸಲಿದ್ದಾರೆ. ದೊಡ್ಡಬಳ್ಳಾಪುರ–ದಾಬಸ್‌ಪೇಟೆ ಮಧ್ಯೆ 5000 ಎಕರೆ ಪ್ರದೇಶದಲ್ಲಿ ಕ್ವಿನ್ ಸಿಟಿ ನಿರ್ಮಾಣ ಮಾಡುತ್ತಿದ್ದು, ಇದರಲ್ಲಿ ಶಿಕ್ಷಣ, ಆರೋಗ್ಯ, ಸಂಶೋಧನೆ ಮತ್ತು ನಾವೀನ್ಯತೆ ಕುರಿತಾದ ಸಂಸ್ಥೆಗಳು ತಲೆ ಎತ್ತಲಿವೆ ಎಂದಿದ್ದಾರೆ.

ಪಾವಂಜೆ ಮೇಳದ ಶ್ರೀ ದೇವಿಮಹಾತ್ಮೆ ಯಕ್ಷಗಾನದ ವೇಳೆ ಶ್ರೀ ಶಾರದಾ ಪ್ರಸಾದ್, ನಳಿನಿ ಶಾರದಾ ಪ್ರಸಾದ್ ದಂಪತಿಗಳನ್ನು ಗೌರವಿಸಲಾಯಿತು.

ಪಟ್ಲ ಟ್ರಸ್ಟ್‌ಗೆ ₹ 1.25 ಕೋಟಿ ನೀಡಿದ ಅಮೆರಿಕ ಉದ್ಯಮಿ

ಬೆಂಗಳೂರು: ಯಕ್ಷಧ್ರುವ ಪಟ್ಲ ಫೌಂಡೇಶನ್‌ಗೆ ಅಮೆರಿಕದ ಉದ್ಯಮಿಯೊಬ್ಬರು 1.25 ಕೋಟಿ ರು. ದೇಣಿಗೆ ನೀಡಿದ್ದಾರೆ.

ಪಾವಂಜೆ ಶ್ರೀ ಜ್ಞಾನಶಕ್ತಿ ಸುಬ್ರಹ್ಮಣ್ಯ ಸ್ವಾಮೀ ಕ್ಷೇತ್ರದ ಪರಮಭಕ್ತ, ಪಟ್ಲ ಸತೀಶ್ ಶೆಟ್ಟಿಯವರ ಕಟ್ಟಾ ಅಭಿಮಾನಿ ಶಾರದಾ ಪ್ರಸಾದ್ ಹಾಗೂ ಅವರ ಪತ್ನಿ ನಳಿನಿ ಪ್ರಸಾದ್ ಅವರು ಪಟ್ಲ ಸತೀಶ್ ಶೆಟ್ಟಿಯವರ ಗೃಹಪ್ರವೇಶಕ್ಕೆ ಆಗಮಿಸಿ ಅವರು ಮಾಡುವ ಸತ್ಕಾರ್ಯಗಳನ್ನು ಮೆಚ್ಚಿ ಗೃಹಪ್ರವೇಶದ ಶುಭದಿನವೇ ದೇಣಿಗೆ ನೀಡಿದ್ದಾರೆ. ಶುಭಕಾರ್ಯದಲ್ಲಿ ಪಾವಂಜೆ ಶ್ರೀ ಜ್ಞಾನಶಕ್ತಿ ಸುಬ್ರಹ್ಮಣ್ಯ ಸ್ವಾಮಿ ಕ್ಷೇತ್ರದ ಆಡಳಿತ ಮೊಕ್ತೇಸರರು ಶಶೀಂದ್ರ ಕುಮಾರ್, ಪಟ್ಲ ಫೌಂಡೇಶನ್ ಪದಾಧಿಕಾರಿಗಳಾದ ಪಟ್ಲ ಗುತ್ತು ಮಹಾಬಲ ಶೆಟ್ಟಿ, ಸುದೇಶ್ ಕುಮಾರ್ ರೈ, ದಿವಾಕರ್ ರಾವ್, ಡಾ. ಸತೀಶ್ ಭಂಡಾರಿ, ಪ್ರದೀಪ್ ಆಳ್ವ ಕದ್ರಿ, ಲಕ್ಷ್ಮೀಶ್ ಭಂಡಾರಿ (ಭಂಡಾರಿ ಬಿಲ್ಡರ್ಸ್) ಇದ್ದರು.

ನಾಳೆ ದೇವುಡು ಕಥಾಲೋಕ ಗ್ರಂಥದ ಲೋಕಾರ್ಪಣೆ

ಬೆಂಗಳೂರು: ಸ್ವಪ್ನ ಬುಕ್ ಹೌಸ್ ಪ್ರಕಟಣೆಯ ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ ವಿಶ್ರಾಂತ ಕುಲಪತಿ ಪ್ರೊ ಮಲ್ಲೇಪುರಂ ಜಿ ವೆಂಕಟೇಶ ಸಂಪಾದಿಸಿರುವ ದೇವುಡು ಕಥಾಲೋಕ ಗ್ರಂಥ ಲೋಕಾರ್ಪಣೆ ಮತ್ತು ಅಮೆರಿಕದ ಗೋಲ್ಡನ್ ಗೇಟ್ ವಿಶ್ವವಿದ್ಯಾಲಯದಿಂದ ಪಿಎಚ್‌ಡಿ ಪಡೆದ ಡಾ ಕೆ.ಜಿ ಲಕ್ಷ್ಮೀನಾರಾಯಣಪ್ಪ ಅವರಿಗೆ ಉದಯ ಪ್ರಕಾಶನದ ವತಿಯಿಂದ ಅಭಿನಂದನಾ ಕಾರ್ಯಕ್ರಮ ಗುರುವಾರ ಸಂಜೆ 5.30ಕ್ಕೆ ನಯನ ಸಭಾಂಗಣದಲ್ಲಿ ಆಯೋಜಿಸಲಾಗಿದೆ.

ತುಮಕೂರು ವಿಶ್ವವಿದ್ಯಾಲಯ ವಿಶ್ರಾಂತಿ ಕುಲಪತಿ ಪ್ರೊ. ವೈ.ಎಸ್ ಸಿದ್ದೇಗೌಡ ಗ್ರಂಥ ಲೋಕಾರ್ಪಣೆ ಮತ್ತು ಅಭಿನಂದನೆ ನಡೆಸಿಕೊಡುವರು. ಹಿರಿಯ ವಿದ್ವಾಂಸ ಮತ್ತು ಸಂಸ್ಕೃತಿ ಚಿಂತಕ ಪ್ರೊ ಕೆ. ಈ ರಾಧಾಕೃಷ್ಣ, ಕನ್ನಡ ಸಾಹಿತ್ಯ ಪರಿಷತ್ತು ಪ್ರಕಟನಾ ವಿಭಾಗದ ಸಂಚಾಲಕ ಡಾ ಎನ್.ಎಸ್ ಶ್ರೀಧರಮೂರ್ತಿ ಗ್ರಂಥ ಪರಿಚಯಿಸಲಿದ್ದಾರೆ. ಅಮೆರಿಕದ ಗೋಲ್ಡನ್ ಗೇಟ್ ಸ್ಯಾನ್ ಫ್ಯಾನ್ಸಿ ಸ್ಕೊ ವಿಶ್ವವಿದ್ಯಾಲಯದವರು ಹಿರಿಯ ಸಾಹಿತಿ ಮತ್ತು ಸಂಶೋಧಕ ಡಾ ಕೆ.ಜಿ ಲಕ್ಷ್ಮೀನಾರಾಯಣಪ್ಪ ಹಿಸ್ಟರಿ ಅಂಡ್ ಕಲ್ಚರ್ ಆಫ್ ಟ್ರೆಡಿಷನಲ್ ವೀವರ್ಸ್ ಆಫ್ ಸೌತ್ ಇಂಡಿಯಾ ವಿಷಯದ ಕುರಿತು ಸಲ್ಲಿಸಿದ ಪ್ರೌಢ ಪ್ರಬಂಧಕ್ಕೆ ಡಾಕ್ಟರೇಟ್ ಪದವಿ ನೀಡಿ ಗೌರವಿಸಿದೆ.

ಪದ್ಮಶಾಲಿ ಜನಾಂಗದ ಇತಿಹಾಸ ಸಂಸ್ಕೃತಿ ದರ್ಶನದ ಕುರಿತು ಆಳವಾದ ಅಧ್ಯಯನ ನಡೆಸಿರುವ ಅವರು, ಕೇಂದ್ರ ಸುಂಕ ಇಲಾಖೆಯಲ್ಲಿ ಹಿರಿಯ ಅಧಿಕಾರಿಯಾಗಿ ಪ್ರವೃತ್ತಿಯಲ್ಲಿ ಸಂಶೋಧಕರಾಗಿ ಅನೇಕ ಕೃತಿ ಗಳನ್ನು ರಚಿಸಿದ್ದಾರೆ. ಈ ಕಾರ್ಯಕ್ರಮದಲ್ಲಿ ಸಾಹಿತ್ಯಾಸಕ್ತರು ಭಾಗವಹಿಸಬೇಕು ಎಂದು ಸಪ್ನ ಬುಕ್ ಹೌಸ್ ವ್ಯವಸ್ಥಾಪಕ ನಿರ್ದೇಶಕ ನಿತಿನ್ ಶಾ ಮತ್ತು ಉದಯ ಪ್ರಕಾಶನದ ಪ್ರಕಾಶಕಿ ಎಂ.ಡಿ ಶೈಲಜಾ ತಿಳಿಸಿದ್ದಾರೆ.

ಪ್ರಯಾಗರಾಜ ಮಹಾಕುಂಭಮೇಳದಲ್ಲಿ ಉತ್ತರಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ ಹಾಗೂ ಆರ್ಟ್ ಆಫ್ ಲಿವಿಂಗ್‌ನ ರವಿಶಂಕರ್ ಗುರೂಜಿ, ವಚನಾನಂದ ಸ್ವಾಮೀಜಿ ಭಾಗವಹಿಸಿದ್ದರು.

ಕುಂಭಮೇಳಕ್ಕೆ ವಚನಾನಂದ ಶ್ರೀ

ಬೆಂಗಳೂರು: ಪ್ರಯಾಗರಾಜ ಮಹಾಕುಂಭ ಮೇಳ ಪರ್ವಕಾಲದಲ್ಲಿ ಉತ್ತರಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ ಹಾಗೂ ಆರ್ಟ್ ಆಫ್ ಲಿವಿಂಗ್‌ನ ರವಿಶಂಕರ್ ಗುರೂಜಿ ಅವರನ್ನು ಹರಿಹರದ ವೀರಶೈವ ಲಿಂಗಾಯತ ಪಂಚಮಸಾಲಿ ಪೀಠ ಜಗದ್ಗುರು ಶ್ರೀ ವಚನಾನಂದ ಸ್ವಾಮೀಜಿ ಭೇಟಿ ಮಾಡಿದ್ದರು. ರವಿಶಂಕರ್ ಗುರೂಜಿ ಅವರು ಮುಖ್ಯ ಮಂತ್ರಿ ಯೋಗಿ ಆದಿತ್ಯನಾಥರ ಬಳಿ ನಮ್ಮನ್ನು ಕರೆದೊಯ್ದು ನಮ್ಮ ಯೋಗ ಸಾಧನೆ ಹಾಗೂ ವೀರಶೈವ–ಲಿಂಗಾಯತ ಪಂಚಮ ಸಾಲಿ ಪೀಠ ಪರಂಪರೆಯನ್ನು ಪರಿಚಯಿಸಿ ದರು. ಯೋಗಿ ಆದಿತ್ಯನಾಥರು ಪ್ರಯಾಗ ರಾಜ ಮಹಾಕುಂಭ ಮೇಳಕ್ಕೆ ಕರ್ನಾಟಕದಿಂದ ಆಗಮಿಸಿದ್ದಕ್ಕೆ ಹೃದಯತುಂಬಿ ಸ್ವಾಗತಿಸಿದರು. ಎರಡನೆಯ ದಾಗಿ ಯೋಗ ಸಾಧನೆಗೆ ಮೂಲಕ ಯೋಗ ಯುಕ್ತ–ರೋಗಮುಕ್ತ ಸ್ವಸ್ಥ ಸಮಾಜ ನಿರ್ಮಾಣ ಸೇವಾಕಾರ್ಯವನ್ನು ಶ್ಲಾಘಿಸಿ ದರು ಎಂದು ಶ್ರೀ ವಚನಾನಂದ ಸ್ವಾಮೀಜಿ ತಿಳಿಸಿದ್ದಾರೆ. ಈ ಸಂದರ್ಭದಲ್ಲಿ ವಿಜಯಾ ನಂದ ಸರಸ್ವತಿಯವರು ಹಾಗೂ ಜರ್ಮನ ದೇಶದ ಯೂರೋಪಿಯನ್ ಪಾರ್ಲಿಮೆಂಟಿನ ಮಾಜಿ ಸಂಸದರಾದ ಜೋಸೆಫ್ ಲೆನಿನ್ ಹಾಜರಿದ್ದರು.

ಕಿವಿ ಚುಚ್ಚಲು ಅನಸ್ತೇಷಿಯಾ: ಮಗು ಸಾವು

ಚಾಮರಾಜನಗರ: ಕಿವಿ ಚುಚ್ಚಲು ಅನಸ್ತೇಷಿಯಾ ನೀಡಿದ ಹಿನ್ನೆಲೆ ಆರು ತಿಂಗಳ ಗಂಡು ಮಗು ಸಾವನ್ನಪ್ಪಿದ ಘಟನೆ ಗುಂಡ್ಲುಪೇಟೆ ತಾಲೂಕಿನ ಬೊಮ್ಮಲಾಪುರ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ನಡೆದಿದೆ. ವೈದ್ಯರ ನಿರ್ಲಕ್ಷ್ಯಕ್ಕೆ ಮಗು ಸಾವನ್ನಪ್ಪಿದೆ ಎಂದು ಪೋಷಕರು ಆರೋಪಿಸಿದ್ದಾರೆ. ತಾಲೂಕಿನ ಹಂಗಳ ಗ್ರಾಮ ಆನಂದ್-ಶುಭ ದಂಪತಿಯ ಆರು ವರ್ಷದ ಗುಂಡು ಮಗು ಅಸುನೀಗಿದೆ. ಬಾಣಂತನಕ್ಕೆ ತಾಯಿ ಶುಭ ಸ್ವಗ್ರಾಮ ಶೆಟ್ಟಹಳ್ಳಿಯಲ್ಲಿದ್ದರು. ಕಿವಿ ಚುಚ್ಚಿಸುವ ಸಲುವಾಗಿ ಮಗುವನ್ನು ಬೊಮ್ಮಲಾಪುರ ಆಸ್ಪತ್ರೆಗೆ ಕರೆದೊಯ್ದಿದ್ದಾರೆ. ವೈದ್ಯ ಡಾ.ನಾಗರಾಜು ಮಗುವಿನ ಎರಡು ಕಿವಿಗಳಿಗೆ ಅನಸ್ತೆಷಿಯಾ ಚುಚ್ಚುಮದ್ದು ನೀಡಿದ್ದಾರೆ. ಈ ವೇಳೆ ಓವರ್ ಡೋಸ್ ಆಗಿದ್ದು, ಮಗುವಿನ ಬಾಯಿಯಲ್ಲಿ ನೊರೆ ಬಂದು ಪ್ರಜ್ಞಾಹೀನ ಸ್ಥಿತಿ ತಲುಪಿದೆ. ನಂತರ ವೈದ್ಯರು ತಾಲೂಕು ಆಸ್ಪತ್ರೆಗೆ ಕರೆದೊಯ್ಯಲು ಸೂಚಿಸಿದರು.ಆದರೆ ಬೊಮ್ಮಲಾಪುರ ಆಸ್ಪತ್ರೆಯಲ್ಲಿಯೇ ಮಗು ಅಸುನೀಗಿದೆ. ಇದಕ್ಕೆ ವೈದ್ಯರ ಎಡವಟ್ಟೇ ಕಾರಣ ಎಂದು ಪೋಷಕರು ದೂರಿದ್ದಾರೆ.

ವೈದ್ಯರ ವಿರುದ್ಧ ಕ್ರಮಕ್ಕೆ ಸಿದ್ಧ: ಈ ಸಂಬಂಧ ಗುಂಡ್ಲುಪೇಟೆ ತಾಲೂಕು ಆರೋಗ್ಯಾಧಿಕಾರಿ ಡಾ.ಅಲೀಂ ಪಾಷಾ ಪ್ರತಿಕ್ರಿಯೆ ನೀಡಿ, ಕಿವಿ ಚುಚ್ಚುವ ವೇಳೆ ನೋವಾಗಬಾರದೆಂದು ವೈದ್ಯರು ಅನಸ್ತೇಷಿಯಾ ಕೊಟ್ಟಿದ್ದಾರೆ. ನಂತರ ಮಗುವಿಗೆ ಫಿಟ್ಸ್ ಕಾಣಿಸಿಕೊಂಡು ಅಸುನೀಗಿದೆ ಎಂದು ವೈದ್ಯರು ತಿಳಿಸಿದ್ದಾರೆ. ಮರಣೋತ್ತರ ಪರೀಕ್ಷೆ ನಂತರ ಸೂಕ್ತ ಕಾರಣ ತಿಳಿಯಲಿದ್ದು, ವೈದ್ಯರ ನಿರ್ಲಕ್ಷ್ಯ ಧೃಢಪಟ್ಟರೆ ಕ್ರಮ ಕೈಗೊಳ್ಳಲಾಗುವುದು ಎಂದು ಸ್ಪಷ್ಟಪಡಿಸಿದರು.

ಸನಾತನ ಪರಂಪರೆಗೆ ಅಪಮಾನ ಸಹಿಸುವುದಿಲ್ಲ

ಭಾರತೀಯ ಸಂಸ್ಕೃತಿ ಉತ್ಸವದಲ್ಲಿ ಶಾಸಕ ಯತ್ನಾಳ್ ಎಚ್ಚರಿಕೆ | ಸನಾತನ ಸಂಸ್ಕೃತಿ ರಕ್ಷಣೆ ನಮ್ಮ ಧ್ಯೇಯವಾಗಲಿ

ಕಲಬುರಗಿ: ನಮ್ಮ ಸನಾತನದ ಸಂಸ್ಕೃತಿ ಹಾಗೂ ಪರಂಪರೆಗೆ ಆಗುತ್ತಿರುವ ಅಪಮಾನಗಳನ್ನು ನಾವು ಎಂದಿಗೂ ಸಹಿಸುವುದಿಲ್ಲ ಎಂದು ವಿಜಯಪುರ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಎಚ್ಚರಿಕೆ

ಸೇಡಂ ತಾಲೂಕಿನ ಬೀರನಳ್ಳಿಯ ಪ್ರಕೃತಿ ನಗರದಲ್ಲಿ ನಡೆಯುತ್ತಿರುವ ಕೊತ್ತಲ ಸ್ವರ್ಣ ಜಯಂತಿ ಹಾಗೂ ಏಳನೇ ಭಾರತೀಯ ಸಂಸ್ಕೃತಿ ಉತ್ಸವದಲ್ಲಿ ಮಂಗಳವಾರ 'ಪ್ರಕೃತಿ ಮತ್ತು ನಾವು' ಸಮ್ಮೇಳನ ಉದ್ಘಾಟಿಸಿ ಯತ್ನಾಳ್ ಮಾತನಾಡಿದರು.

ದೇಶದಲ್ಲಿ ಪ್ರಕೃತಿಯೊಂದಿಗೆ ವಿಕೃತ ಮನುಸ್ಸುಗಳು ದಿನನಿತ್ಯ ಚೆಲ್ಲಾಟವಾಡುತ್ತಿವೆ. ಇತ್ತೀಚೆಗೆ ಚಾಮರಾಜಪೇಟೆಯಲ್ಲಿ ಗೋವಿನ ಕೆಚ್ಚಲು ಕೊಯ್ದಿದ್ದು ಸನಾತನ ಧರ್ಮಕ್ಕೆ ದೊಡ್ಡ ಅಪಮಾನ ಮಾಡಿದ್ದಾರೆ ಎಂದ ಅವರು, ರಾಜ್ಯದಲ್ಲಿ ಅಭಿವೃದ್ಧಿ ಎಂದರೆ ಕೇವಲ ರಸ್ತೆ ನಿರ್ಮಾಣ, ವಿಮಾನ ನಿಲ್ದಾಣ ಮಾಡುವುದು, ಡ್ಯಾಂ ಕಟ್ಟಿಸುವುದು ಅಷ್ಟೇ ಅಲ್ಲ. ಬದಲಾಗಿ ನಮ್ಮ ಸಂಸ್ಕೃತಿ, ನಮ್ಮತನ, ನಮ್ಮವರನ್ನು ಉಳಿಸಿಕೊಂಡು ನಮಗೆ ಸಂಬಂಧ ಪಟ್ಟ ದೇವರ ಉಳಿವಿಗಾಗಿ ಕೆಲಸ ಮಾಡುವುದು ಕೂಡ ನಮ್ಮ ಮೂಲ ಉದ್ದೇಶವಾಗಿರಬೇಕು. ಕೆಚ್ಚಲು ಕೊಯ್ಯುವಂತಹ ಘಟನೆಗಳು ರಾಜ್ಯದಲ್ಲಿ ನಡೆಯುತ್ತಿದ್ದರು ನಾವು ಸುಮ್ಮನೆ ಕೂರುವುದು ಸರಿಯಲ್ಲ. ಸ್ವಾಭಿಮಾನಿಯಾಗಿ ನಮ್ಮತನವನ್ನು ಉಳಿಸುವುದು ನಮ್ಮ ಹಕ್ಕು ಎಂದು ಹೇಳಿದರು.

ನಿಸರ್ಗದ ಜತೆ ಚೆಲ್ಲಾಟ ನಿಲ್ಲಿಸಿ: ನಿಸರ್ಗದ ಜತೆಗೆ ಚೆಲ್ಲಾಟ ಕೂಡಲೇ ನಿಲ್ಲಿಸಬೇಕು. ಪ್ರಕೃತಿಯ ವಿರುದ್ಧವಾದ ಕಾರ್ಯಗಳಿಗೆ ಕೈಹಾಕಿದಾಗ ಅದಕ್ಕೆ ತಕ್ಕವಾದ ಪಾಠ ಪ್ರಕೃತಿಯಿಂದ ಎದುರಿಸಬೇಕಾಗುತ್ತದೆ. ಪ್ರಕೃತಿಗೆ ಪ್ರಿಯವಾದ ಗೋವಿನ ಉಳಿವಿಗೆ ವಿಜಯಪುರದಲ್ಲಿ 45ರಿಂದ ಪ್ರಾರಂಭವಾದ ಗೋಶಾಲೆ, ಇದೀಗ 1000 ಗೋವುಗಳುಳ್ಳ ಅತಿದೊಡ್ಡ ಗೋಶಾಲೆಯಾಗಿ ಹೊರಹೊಮ್ಮಿದೆ ಎಂದು ಯತ್ನಾಳ್ ವಿವರಿಸಿದರು.

ವಿವಿಧ ಗಣ್ಯರು ಭಾಗಿ: ತೆಲಂಗಾಣದ ಹಸಿರು ಕ್ರಾಂತಿ ಪರಿಷತ್ತಿನ ಅಧ್ಯಕ್ಷೆ ಲೀಲಾ ಲಕ್ಷ್ಮಾರೆಡ್ಡಿ, ಜಮ್ಮು -ಕಾಶ್ಮೀರ ಅಧ್ಯಯನ ಕೇಂದ್ರದ ಸದಸ್ಯೆ ಹಾಗೂ ಕಾಶ್ಮೀರ ಫೈಲ್ಸ್ ಚಲನಚಿತ್ರದ ನಟಿ ಭಾಷಾ ಸುಂಬಲಿ ಮಾತನಾಡಿದರು.

ಈ ವೇಳೆ ಜಮ್ಮು ಕಾಶ್ಮೀರ ಅಧ್ಯಯನ ಸಂಸ್ಥೆ ಅಧ್ಯಕ್ಷೆ ಶಕ್ತಿ ಮುನ್ನೀಜಿ, ಲಾತೂರಿನ ಪರಿಸರ ಸಂಯೋಜನೆ ಮತ್ತು ವ್ಯಕ್ತಿ ವಿಕಾಸ ಕೇಂದ್ರದ ನಿರ್ದೇಶಕ ಮಹಾದೇವ ಗೊಮಾರೆ, ಶಿಕ್ಷಣ ತಜ್ಞ ಡಾ. ಗುರುರಾಜ ಕರಜಗಿ, ಪರಬಣಿಯ ವಸಂತರಾವ ನಾಯಕ್ ಕೃಷಿ ವಿಶ್ವವಿದ್ಯಾಲಯದ ಉಪಕುಲಪತಿ ಇಂದ್ರಮಣಿ, ನವದೆಹಲಿಯ ಸೇವಾ ಇಂಟರ್‌ನ್ಯಾಷನಲ್ ಕಾರ್ಯದರ್ಶಿ ಶ್ಯಾಮ್ ಪರಂಡೇಜಿ, ತೆಲಂಗಾಣದ ರವಿ ಮೇರೆಡ್ಡಿ, ಮುಂಬಯಿನ ಸಮಸ್ತ ಮಹಾಜನ ಟ್ರಸ್ಟ್ ಸದಸ್ಯ ಗಿರಿಶಬಾಯ್ ಶಹಾ, ಧನ್ ಬಹದ್ದೂರ ಛತ್ರಿ, ವಿವೇಕ್ ತ್ಯಾಗಿ, ಅರವಿಂದ ತಿವಾರಿ ಮೊದಲಾದವರು ಇದ್ದರು.

ಕೇವಲ 20 ದಿನಗಳಲ್ಲಿ ಕಲಬುರಗಿ ಜಿಲ್ಲೆಯ ಚಿಂಚೋಳಿಯಲ್ಲಿ 17 ಸಾವಿರ ಸಸಿಗಳನ್ನು ನೆಡುವ ಮೂಲಕ ಪ್ರಕೃತಿಗೆ ಪೂರಕವಾದ ಕೆಲಸವನ್ನು ಮಾಡಲಾಗಿದೆ. ಪ್ರಕೃತಿಯಪ್ರಿಯವಾದ ಸಮಾಜದ ನಿರ್ಮಾಣಕ್ಕೆ ನಾವೆಲ್ಲರೂ ಕೈಜೋಡಿಸಬೇಕು. ಪ್ರಕೃತಿ ಮೇಲೆ, ಮಹಿಳೆಯರ ಮೇಲೆ, ಗೋವುಗಳ ಮೇಲೆ ನಡೆಸಲಾಗುತ್ತಿರುವ ಹಲ್ಲೆಗಳು ಖಂಡನೀಯ. ಹೀಗಾಗಿ ಸಮಾಜದಲ್ಲಿ ಬದಲಾವಣೆ ಬಯಸುವ ಮುನ್ನ ನಮ್ಮಲ್ಲಿ ಮೊದಲು ಬದಲಾವಣೆ ತರೋಣ ಎಂದು ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಕರೆ ನೀಡಿದರು.

ತ್ಯಾಗಮಯ ಜೀವನದಿಂದ ಶಾಂತಿ

ಪ್ರಕೃತಿಯು ನಮಗೆ ತ್ಯಾಗಮಾಡಿದಂತೆ ನಾವು ಪ್ರಕೃತಿಗೆ ತ್ಯಾಗಮಾಡುವ ಮನಸ್ಥಿತಿ ಬೆಳೆಸಿಕೊಂಡಾಗ ವಿಶ್ವಶಾಂತಿ ಮೂಡುತ್ತದೆ. ವ್ಯಕ್ತಿ ವಿಕಾಸ, ಕುಟುಂಬ ವಿಕಾಸ, ಸಮಾಜದ ಪರಿಕಲ್ಪನೆ ಮೂಡಿಸಿಕೊಂಡು ಶಾರೀರಿಕ, ಮಾನಸಿಕ, ಬೌದ್ಧಿಕ ಮತ್ತು ಆಧ್ಯಾತ್ಮಿಕ ಸಂಸ್ಕಾರ ಬೆಳೆಸಿಕೊಂಡಾಗ ಸಮಗ್ರ ವಿಕಾಸ ಸಾಧ್ಯವಾಗುತ್ತದೆ ಎಂದು ರಾಷ್ಟ್ರೀಯ ಸ್ವಯಂಸೇವಕ ಸಂಘದ ಅಖಿಲ ಭಾರತ ವಿದ್ಯಾಭಾರತಿ ಅಧ್ಯಕ್ಷ ಮತ್ತು ದಕ್ಷಿಣ ಮಧ್ಯ ಸಹ ಸಂಘಚಾಲಕ ದೂಸಿ ರಾಮಕೃಷ್ಣರಾವ್ ಹೇಳಿದರು.



ರಾಜಕಾರಣಿಗಳು ತಮ್ಮ ಸ್ವಾರ್ಥಕ್ಕೆ ಕಾರ್ಯಕ್ರಮ ನಡೆಸುತ್ತಾರೆ.ಆದರೆ, ಬಸವರಾಜ ಪಾಟೀಲ್ ಸೇಡಮ್ ಅವರು ಭವಿಷ್ಯದ ಮಕ್ಕಳಿಗಾಗಿ,ನಮ್ಮ ಸಂಸ್ಕೃತಿ ಉಳಿವಿಗಾಗಿ ರಾಜಕೀಯವನ್ನೇ ತ್ಯಾಗ ಮಾಡಿ ಇಂತಹ ಉತ್ಸವಗಳನ್ನು ಮಾಡುವ ಮುಖೇನ ನಮಗೆಲ್ಲರಿಗೂ ಪ್ರೇರಣೆಯಾಗಿದ್ದಾರೆ.

- ಬಸನಗೌಡ ಪಾಟೀಲ್ ಯತ್ನಾಳ್ ಶಾಸಕ

ಧರ್ಮರಕ್ಷಣೆಗಾಗಿ ಕ್ರಾಂತಿವೀರ ಬ್ರಿಗೇಡ್

← ಮೊದಲಪುಟದಿಂದ

ಕಾಗಿನೆಲೆ ಕನಕಗುರುಪೀಠ ತಿಂಥಿಣಿ ಶಾಖಾಮಠದ ಸಿದ್ಧರಾಮಾನಂದಪುರಿ ಸ್ವಾಮೀಜಿ, ಲೋಕಾಪುರದ ಜಗದೀಶ ಆನಂದ ಸ್ವಾಮೀಜಿ, ಮಕನಾಪುರದ ಸೋಮೇಶ್ವರ ಸ್ವಾಮೀಜಿ, ಹುಲಜಂತಿ ಮಾಲಿಂಗರಾಯರು, ಅಮರೇಶ್ವರ ಸ್ವಾಮಿಜಿ, ಸಿದ್ಧಲಿಂಗ ಸ್ವಾಮೀಜಿ, ಶಿವಪ್ರಕಾಶ ಶಿವಾಚಾರ್ಯ ಸ್ವಾಮೀಜಿ, ಅಭಿನವ ಸಂಗನಬಸವ ಶಿವಾಚಾರ್ಯ ಸ್ವಾಮೀಜಿ ಸೇರಿದಂತೆ ಸಾವಿರಾರು ಮಠಾಧೀಶರು ಉಪಸ್ಥಿತರಿದ್ದರು. ಸಮಾರಂಭದಲ್ಲಿ 50 ಸಾವಿರಕ್ಕೂ ಅಧಿಕ ಜನಸ್ತೋಮ ಭಾಗಿಯಾಗಿತ್ತು.

ಬೃಹತ್ ಕುಂಭೋತ್ಸವ

ಬ್ರಿಗೇಡ್ ಉದ್ಘಾಟನೆಗೂ ಮುನ್ನ ಬಸವನಬಾಗೇವಾಡಿ ಪಟ್ಟಣದಲ್ಲಿ 1008 ಮಹಿಳೆಯರಿಂದ ಬೃಹತ್ ಕುಂಭೋತ್ಸವ ಜರುಗಿತು. ಕನ್ನೇರಿ ಸ್ವಾಮೀಜಿ ನೇತೃತ್ವದಲ್ಲಿ ಸ್ವಾಮೀಜಿಗಳು ಕುಂಬಳಕಾಯಿ ಒಡೆದು ಬೃಹತ್ ತೆರೆ ಅನಾವರಣಗೊಳಿಸಿ ಲಾಂಛನ ಬಿಡುಗಡೆಗೊಳಿಸಿದರು.ಜತೆಗೆ ಬ್ರಿಗೇಡ್ ಗೀತೆ ಹಾಗೂ ಬ್ರಿಗೇಡ್ ಗೀತೆಯ ಸಿ.ಡಿ. ಅನಾವರಣಗೊಳಿಸಿದರು.

ದಿನದಿಂದ ದಿನಕ್ಕೆ ಹಿಂದೂಗಳ ಸಂಖ್ಯೆ ಕಡಿಮೆಯಾಗುತ್ತಿದೆ. ಹಿಂದೂಗಳ ಜನಸಂಖ್ಯೆ ಶೇ.50ಕ್ಕಿಂತಲೂ ಕಡಿಮೆಯಾದಾಗ ಸಂವಿಧಾನ, ಪ್ರಜಾತಂತ್ರ ಉಳಿಯಲ್ಲ. ಬಾಂಗ್ಲಾದೇಶ ಇದಕ್ಕೆ ಸೂಕ್ತ ಉದಾಹರಣೆ. ಕೇರಳದ ಕಲ್ಲಿಕೋಟೆಯಲ್ಲಿ ಕಿಟಕಿ ಬದಲಾಯಿಸಲು ಇಸ್ಲಾಂ ಧರ್ಮ ಸೇರಬೇಕಾಗಿದೆ. ಕಾಸರಗೋಡಿನಲ್ಲಿ ಹಿಂದೂಗಳ ಮನೆಯ ಮುಂದೆಯೇ ಗೋವು ಕಡಿದು ಮಾಂಸ ಹಂಚಿಕೊಳ್ಳುತ್ತಾರೆ.

- ಕಾಡಸಿದ್ದೇಶ್ವರ ಸ್ವಾಮೀಜಿ ಕನ್ಹೇರಿ ಮಠ

ಕರ್ನಾಟಕ ಸರ್ಕಾರ
ಕಾರ್ಯನಿರ್ವಾಹಕ ಅಭಿಯಂತರರ ಕಛೇರಿ, ಲೋಕೋಪಯೋಗಿ ಇಲಾಖೆ ವಿಭಾಗ, ಬಳ್ಳಾರಿ
Email: ee_pwdbellary@yahoo.com ದೂರವಾಣಿ ಸಂ: 08392 266123
ಸಂ:ಕಾನಿಇ/ಲೋಇ/ಬವಿ/ಟಿ.ಎಸ್-5/2024-25/4932 ದಿನಾಂಕ:03-02-2025

ಅಲ್ಪಾವಧಿ ಟೆಂಡರ್ ಪ್ರಕಟಣೆ

ಕರ್ನಾಟಕ ಲೋಕೋಪಯೋಗಿ ಇಲಾಖೆಯಲ್ಲಿ ನೊಂದಾಯಿತರಾದ ಆಸಕ್ತಿಯುಳ್ಳ ಗುತ್ತಿಗೆದಾರರಿಂದ ಈ ಕೆಳಕಾಣಿಸಿದ ಕಾಮಗಾರಿಗೆ ದ್ವಿ ಲಕೋಟೆ ಪದ್ಧತಿಯಂತೆ ಟೆಂಡರುಗಳನ್ನು ಕರ್ನಾಟಕ ಪಬ್ಲಿಕ್ ಪ್ರೊಕ್ಯೂರ್‌ಮೆಂಟ್ ಪೋರ್ಟಲ್ ಮುಖಾಂತರ ಆಹ್ವಾನಿಸಲಾಗಿದೆ. ಅರ್ಹ ಗುತ್ತಿಗೆದಾರರು ಪ್ರಕಟಣೆಯಲ್ಲಿನ ಕಾಮಗಾರಿಗಳನ್ನು ಅಂತರ್ಜಾಲದ ಮೂಲಕ ವೆಬ್ ಸೈಟ್ ವಿಳಾಸ **https:kppp.karnataka.gov.in** ವನ್ನು ಸಂದರ್ಶಿಸಬಹುದಾಗಿರುತ್ತದೆ. ಹೆಚ್ಚಿನ ಮಾಹಿತಿ ಬೇಕಾದಲ್ಲಿ ಗುತ್ತಿಗೆದಾರರು ಈ ಕೆಳಗೆ ಸಹಿ ಮಾಡಿದ ಅಧಿಕಾರಿಗಳ ಕಛೇರಿಯಲ್ಲಿ ಕಛೇರಿ ಕೆಲಸದ ವೇಳೆಯಲ್ಲಿ ಪಡೆಯಬಹುದಾಗಿರುತ್ತದೆ.

ಕ್ರ ಸಂ	ಕಾಮಗಾರಿಗಳ ವಿವರ	ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ)
1)	PWD/2024-25/EL/WORK_INDENT17917	80.00

